Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣಕು

## 24-12-2020



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ತ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಸಂಜೆ ವಾಣಿ
11. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

'ಬೆಂಗಳೂರು ಮಿಷನ್–2022' • 'ಸ್ವಚ್ಛ ಬೆಂಗಳೂರು' ಅನುಷ್ಠಾನಕ್ಕೆ ಸಿದ್ಧತೆ

# ಕಸ ಸಾಗಣೆ ವಾಹನಗಳಿಗೆ ಶೀಘ್ರ ಜಿಪಿಎಸ್

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ಮನೆ ಮನೆಯಿಂದ ಕಸ ಸಂಗ್ರಹಿಸುವ ಎಲ್ಲ ವಾಹನಗಳ ಮೇಲೆ ನಿಗಾ ಇಡುವ ಕ್ರಮವಾಗಿ ಈಗಾಗಲೇ ಶೇ 90ರಷ್ಟು ವಾಹನಗಳಿಗೆ ಆರ್‌ಎಫ್‌ಐಡಿ ಕಾರ್ಡ್‌ ಹಾಗೂ ಶೇ 60 ರಷ್ಟು ವಾಹನಗಳಿಗೆ ಜಿಪಿಎಸ್ ಅಳವಡಿಸುವ ಕಾರ್ಯ ಪೂರ್ಣಗೊಂಡಿದೆ' ಎಂದು ಬಿಬಿಎಂಪಿ ವಿಶೇಷ ಆಯುಕ್ತ (ಕಸ ವಿಲೇವಾರಿ) ಡಿ.ರಂದೀಪ್ ತಿಳಿಸಿದರು.

ರಾಜ್ಯ ಸರ್ಕಾರದ 'ಬೆಂಗಳೂರು ಮಿಷನ್-2022' ಯೋಜನೆಯಡಿ 'ಸ್ವಚ್ಛ ಬೆಂಗಳೂರು' ಕಾರ್ಯಕ್ರಮದ ಜಾರಿಗೆ ಕೈಗೊಂಡಿರುವ ಕಾರ್ಯಗಳ ಬಗ್ಗೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ನೇತೃತ್ವದಲ್ಲಿ ಬುಧವಾರ ನಡೆದ ಸಭೆಯಲ್ಲಿ ಅವರು ಈ ಮಾಹಿತಿ ನೀಡಿದರು.

'ಪಾಲಿಕೆ ವ್ಯಾಪ್ತಿಯಲ್ಲಿ ಕಸ ವಿಲೇವಾರಿಗೆ ಹಲವಾರು ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ. 7 ಕಸ ಸಂಸ್ಕರಣಾ ಘಟಕಗಳ ಅಭಿವೃದ್ಧಿ ಹಾಗೂ ಅವುಗಳ ಸಾಮರ್ಥ್ಯ ಹೆಚ್ಚಿಸುವಿಕೆಗೂ ಕ್ರಮವಹಿಸಲಾಗಿದೆ' ಎಂದು ರಂದೀಪ್ ತಿಳಿಸಿದರು.

'ಆಟೊ ಟಿಪ್ಪರ್‌ಗಳು ಮನೆ ಮನೆಗೆ ತೆರಳಿ ಕಸ ಸಂಗ್ರಹಿಸುವುದನ್ನು ಖಾತರಿ ಪಡಿಸಿಕೊಳ್ಳಲು ತಂತ್ರಜ್ಞಾನ ಆಧರಿತ ವ್ಯವಸ್ಥೆ ಅಳವಡಿಸಲಾಗುತ್ತಿದೆ. ಕಸ ಸಂಗ್ರಹ, ವಿಲೇವಾರಿ ಸಮರ್ಪಕ ನಿರ್ವಹಣೆಗೆ ಕಮಾಂಡ್ ಕಂಟ್ರೋಲ್ ಸೆಂಟರ್ ಸ್ಥಾಪಿಸಲಾಗುತ್ತದೆ. ಕ್ಷಣ ಕ್ಷಣದ ವಿವರ ಡ್ಯಾಶ್ ಬೋರ್ಡ್‌ನಲ್ಲಿ ಲಭ್ಯವಾಗಲಿದೆ. ವಾಹನಗಳ ಚಲನೆಯನ್ನು ವೀಕ್ಷಿಸಲು ಇದು ಸಹಕಾರಿ. ಕಸ ರಾಶಿ ಹಾಕುವ ತಾಣಗಳನ್ನು (ಬ್ಲ್ಯಾಕ್ ಸ್ಪಾಟ್) ನಕಾಶೆಯಲ್ಲಿ ಗುರುತಿಸುತ್ತೇವೆ. ಅಂತಹ ಸ್ಥಳಗಳಲ್ಲಿ ಕಸ ಸುರಿಯುವವರ ವಿರುದ್ಧ ಕ್ರಮಕೈಗೊಳ್ಳಲಿದ್ದೇವೆ' ಎಂದು ಅವರು ವಿವರಿಸಿದರು.



ಸಭೆಯಲ್ಲಿ ಗೌರವ್ ಗುಪ್ತ ಮಾತನಾಡಿದರು

ಗೌರವ್ ಗುಪ್ತ ಅವರು, 'ಕಸ ವಿಲೇವಾರಿಯ ಎಲ್ಲ ಪ್ರಕ್ರಿಯೆಗಳ ಮೇಲೆ ನಿಗಾವಹಿಸಲು ವಿವಿಧ ವೆಬ್ ಅಪ್ಲಿಕೇಷನ್‌ಗಳನ್ನು ಒಂದೇ ಸೂರಿನಡಿ ತರಬೇಕು. ಜಿಪಿಎಸ್ ಅಳವಡಿಸಲಾಗಿರುವ ವಾಹನಗಳ ಮಾಹಿತಿಯೂ ಇದರ ಮೂಲಕ ಸಾರ್ವಜನಿಕರಿಗೆ ಸಿಗಬೇಕು. ಕಸ ಸುರಿಯುವ ತಾಣಗಳ ಬಗ್ಗೆ ಸಾರ್ವಜನಿಕರೇ ಮಾಹಿತಿ ನೀಡುವುದಕ್ಕೆ ಅನುವಾಗುವಂತೆ ವ್ಯವಸ್ಥೆ ರೂಪಿಸಬೇಕು. ದೂರುಗಳಿಗೆ ತ್ವರಿತವಾಗಿ ಸ್ಪಂದಿಸಲು ಪಾಲಿಕೆ ಸನ್ನದ್ಧರಾಗಬೇಕು' ಎಂದು ಸಲಹೆ ನೀಡಿದರು.

ವೈಜ್ಞಾನಿಕ ರೀತಿಯಲ್ಲಿ ಕಸ ವಿಲೇವಾರಿಗೆ ಸಮುದಾಯದ ಸಹಯೋಗವೂ ಮುಖ್ಯ. 'ನಮ್ಮ ಕಸ ನಮ್ಮ ಜವಾಬ್ದಾರಿ' ಕಾರ್ಯಕ್ರಮ ರೂಪಿಸಿ, ಅದರಲ್ಲಿ ಎಲ್ಲ ನಾಗರಿಕರು ತಮ್ಮ ಹೊಣೆ ಅರಿತು ಕೈಜೋಡಿಸುವಂತಾಗಬೇಕು. ಮೂಲದಲ್ಲೇ ಹಸಿ ಮತ್ತು ಒಣ ಕಸ ಬೇರ್ಪಡಿಸುವ ಬಗ್ಗೆಯೂ ಜನರಿಗೆ ಹೆಚ್ಚಿನ ತಿಳಿವಳಿಕೆ ನೀಡಬೇಕು. ಮನೆಗಳಲ್ಲಿ ಹಾಗೂ ಅಪಾರ್ಟ್‌ಮೆಂಟ್ ಸಮುಚ್ಚಯಗಳಲ್ಲಿ ಹಸಿ ಕಸದಿಂದ ಗೊಬ್ಬರ ತಯಾರಿಸುವುದಕ್ಕೂ ಉತ್ತೇಜನ ನೀಡಬೇಕು' ಎಂದು ಸಲಹೆ ನೀಡಿದರು.



**'ನಗರದ ಭೂಭರ್ತಿ (ಲ್ಯಾಂಡ್‌ಫಿಲ್) ಪ್ರದೇಶಗಳಲ್ಲಿ ವೈಜ್ಞಾನಿಕವಾಗಿ ಬಯೋ ಮೈನಿಂಗ್ ನಡೆಸಲು ತಂತ್ರಜ್ಞರ ನಿಯೋಜಿಸಬೇಕು. ನಿಖರವಾಗಿ ಅಧ್ಯಯನ ನಡೆಸಿ ಮಾಹಿತಿ ಸಂಗ್ರಹಿಸಬೇಕು.**

**ಡಿ.ರಂದೀಪ್**, ಬಿಬಿಎಂಪಿ ವಿಶೇಷ ಆಯುಕ್ತ (ಕಸ ವಿಲೇವಾರಿ)

ಕಸ ವಿಲೇವಾರಿ ವಿಭಾಗದ ಜಂಟಿ ಆಯುಕ್ತ ಸರ್ಫರಾಜ್ ಖಾನ್, ಮುಖ್ಯ ಎಂಜಿನಿಯರ್ ವಿಶ್ವನಾಥ್, ಸೂಪರಿಂಟೆಂಡಿಂಗ್ ಎಂಜಿನಿಯರ್ ಬಸವರಾಜ್ ಕಬಾಡೆ, ವಲಯ ಮಟ್ಟದ ಸೂಪರಿಂಟೆಂಡಿಂಗ್ ಎಂಜಿನಿಯರ್‌ಗಳು ಸಲಹೆ ನೀಡಿದರು.

## 'ಬ್ಲಾಕ್‌ಗೊಬ್ಬ ಶುಚಿಮಿತ್ರ, ವಾರ್ಡ್‌ಗೊಬ್ಬ ಸ್ವಯಂಸೇವಕ'

'ಪಾಲಿಕೆಯ ವ್ಯಾಪ್ತಿಯಲ್ಲಿ ಕಸ ವಿಲೇವಾರಿಗಾಗಿ 4,200 ಬ್ಲಾಕ್‌ಗಳನ್ನು ರಚಿಸಲಾಗಿದೆ. ಪ್ರತಿ ಬ್ಲಾಕ್‌ನಲ್ಲಿ ಶುಚಿಮಿತ್ರ ಸ್ವಯಂಸೇವಕರನ್ನು ಹಾಗೂ ವಾರ್ಡ್‌ಗೆ ಒಬ್ಬ ಸ್ವಯಂಸೇವಕರನ್ನು ನೇಮಿಸಲಾಗುತ್ತದೆ' ಎಂದು ಆಡಳಿತಾಧಿಕಾರಿ ತಿಳಿಸಿದರು.

'ಇವರಿಗೆ ತರಬೇತಿ ನೀಡಲು ವಿಧಾನಸಭಾ ಕ್ಷೇತ್ರಕ್ಕೊಬ್ಬ ಮಾಸ್ಟರ್ ಟ್ರೈನರ್ ಅವರನ್ನು ನೇಮಿಸಲಾಗುತ್ತದೆ. ಕಸದ ವೈಜ್ಞಾನಿಕ ವಿಲೇವಾರಿ ಬಗ್ಗೆ ಜನಜಾಗೃತಿ ಮೂಡಿಸುವುದು, ಸ್ಥಳೀಯ ನಾಗರಿಕ ಸಂಸ್ಥೆಗಳು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಸ್ಥೆಗಳು (ಆರ್.ಡಬ್ಲ್ಯು.ಎ) ಈ ಕಾರ್ಯದಲ್ಲಿ ಭಾಗವಹಿಸಲು ಇವರು ಉತ್ತೇಜನ ನೀಡಬೇಕು' ಎಂದು ಕೋರಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

### ಕೋವಿಡ್ ನಿಯಂತ್ರಣ: ಸಾಮೂಹಿಕ ಕಾರ್ಯಕ್ರಮಗಳಿಗೆ ಮಾದರಿ ಕಾರ್ಯ ವಿಧಾನ ಬಿಡುಗಡೆ

# ಕ್ರಿಸ್‌ಮಸ್: ಪಾಲಿಕೆ ಮಾರ್ಗಸೂಚಿ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಕ್ರಿಸ್‌ಮಸ್ ಹಾಗೂ ಹೊಸ ವರ್ಷಾಚರಣೆ ಸಂದರ್ಭದಲ್ಲಿ ನಗರದಲ್ಲಿ ಕೋವಿಡ್ ಹರಡುವಿಕೆ ನಿಯಂತ್ರಿಸುವ ಸಲುವಾಗಿ ಬಿಬಿಎಂಪಿ ಮಾರ್ಗಸೂಚಿಗಳನ್ನು ಹೊರಡಿಸಿದೆ.

ದೇವಸ್ಥಾನ ಚರ್ಚ್, ಮಸೀದಿ ಮತ್ತು ಇತರ ಧಾರ್ಮಿಕ ಸ್ಥಳಗಳ ಬಳಿ ಏಕಕಾಲದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಸೇರದಂತೆ ಆಯಾ ಧಾರ್ಮಿಕ ಸ್ಥಳಗಳ ಮೇಲ್ವಿಚಾರಕರು ನೋಡಿಕೊಳ್ಳಬೇಕು. ಜನರು ಅಂತರ ಕಾಪಾಡುವುದಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದೆ.

ಜನ ಹಸ್ತಲಾಘವ ಅಥವಾ ಆಲಿಂಗನ ಮಾಡುವುದನ್ನು ನಿಷೇಧಿಸಲಾಗಿದೆ. 65 ವರ್ಷ ಮೇಲ್ಪಟ್ಟವರು ಹಾಗೂ 10 ವರ್ಷಗಳಿಗಿಂತ ಒಳಗಿನ ಮಕ್ಕಳು ಮನೆಯಲ್ಲೇ ಇರಬೇಕು ಎಂದು ಬಿಬಿಎಂಪಿ ಸೂಚಿಸಿದೆ.

## ಕ್ರಿಸ್‌ಮಸ್/ ಹೊಸ ವರ್ಷಾಚರಣೆ– ಇವು ಗಮನದಲ್ಲಿರಲಿ

- ತೆರೆದ ಸ್ಥಳಗಳಲ್ಲಿ 3.5 ಮೀ ಅಂತರ ಕಾಪಾಡಲು ವ್ಯವಸ್ಥೆ ಒದಗಿಸಬೇಕು ಕಾರ್ಯಕ್ರಮಕ್ಕೆ ಮೊದಲು ಮತ್ತು ನಂತರ ಸ್ಥಳವನ್ನು ಸೋಂಕು ನಿವಾರಕ ಸಿಂಪಡಿಸಿ ಸ್ವಚ್ಛಗೊಳಿಸಬೇಕು
- ಕೋವಿಡ್ ನಿಯಂತ್ರಣದ ಉಸ್ತುವಾರಿಗೆ ಪ್ರತ್ಯೇಕ ವ್ಯಕ್ತಿಯನ್ನು ನೇಮಿಸಬೇಕು ಕೋವಿಡ್ ನಿಯಂತ್ರಣ ನಿಯಮ ಪಾಲನೆ ಬಗ್ಗೆ ನಿಗಾ ಇಡಲು ಸಿಸಿಟಿವಿ ಕ್ಯಾಮೆರಾ ಅಳವಡಿಸಬೇಕು
- ಕೋವಿಡ್ ಲಕ್ಷಣ ಇರುವವರಿಗೆ ಪ್ರವೇಶಾವಕಾಶ ನೀಡಬಾರದು
- ಸ್ಥಳದಲ್ಲಿ ವೈದ್ಯಕೀಯ ಸಲಹೆ ಪಡೆಯಲು ವ್ಯವಸ್ಥೆ ಕಲ್ಪಿಸಬೇಕು
- ಕೋವಿಡ್ ಲಕ್ಷಣ ಕಂಡು ಬಂದವರನ್ನು ಪ್ರತ್ಯೇಕಿಸಲು ವ್ಯವಸ್ಥೆ ಮಾಡಿಕೊಳ್ಳಬೇಕು
- ತುರ್ತು ಸಂದರ್ಭದಲ್ಲಿ ಬಳಸಲು ಆಂಬುಲೆನ್ಸ್‌ನ ಲಭ್ಯತೆ ಹಾಗೂ ಆಸ್ಪತ್ರೆಯ ಸಂಪರ್ಕವನ್ನು ಖಾತರಿಪಡಿಸಿಕೊಳ್ಳಬೇಕು

### ಸಾಮೂಹಿಕ ಆಚರಣೆ ನಿಷೇಧ

ಎಂ.ಜಿ.ರಸ್ತೆ, ಚರ್ಚ್‌ಸ್ಟ್ರೀಟ್, ಬ್ರಿಗೇಡ್ ರಸ್ತೆ, ಕೋರಮಂಗಲ, ಇಂದಿರಾನಗರ ಹಾಗೂ ವೈಟ್‌ಫೀಲ್ಡ್ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವರ್ಷಂಪ್ರತಿ ಜನ ಗುಂಪುಗೂಡಿ ಹೊಸ ವರ್ಷಾಚರಣೆಯನ್ನು ಹಮ್ಮಿಕೊಳ್ಳುತ್ತಿದ್ದರು. ಈ ಪ್ರದೇಶಗಳಲ್ಲಿ ಪ್ರತಿ ವರ್ಷವೂ ಹೊಸ ವರ್ಷವನ್ನು ಸ್ವಾಗತಿಸಲು ಸಾವಿರಾರು ಸಂಖ್ಯೆಯಲ್ಲಿ ಜನ ಸೇರುತ್ತಿದ್ದರು. ಇಲ್ಲಿನ ಪಬ್ ಹಾಗೂ ರೆಸ್ಟೋರಂಟ್‌ಗಳಲ್ಲಿ ವಿಶೇಷ ಮನರಂಜನಾ ಕೂಟಗಳನ್ನು ಆಯೋಜಿಸಲಾಗುತ್ತಿತ್ತು. ಇವುಗಳಿಗೆ ಈ ಬಾರಿ ಬಿಬಿಎಂಪಿ ನಿಷೇಧ ಹೇರಿದೆ.

ಹೋಟೆಲ್, ಮಾಲ್, ಪಬ್, ಕ್ಲಬ್, ರೆಸ್ಟೋರಂಟ್‌ಗಳಲ್ಲಿ ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಜನರ ದೇಹದ ಉಷ್ಣಾಂಶ ತಪಾಸಣೆಗೆ, ಅವರು ಆಗಾಗ ಸ್ಯಾನಿಟೈಸರ್‌ನಿಂದ ಕೈತೊಳೆಯುವುದಕ್ಕೆ ಹಾಗೂ ಸರದಿ ಕಾಪಾಡುವುದಕ್ಕೆ ವ್ಯವಸ್ಥೆ ಕಲ್ಪಿಸಬೇಕು. ಹೆಚ್ಚು ಜನ ಸೇರುವುದನ್ನು ತಡೆಯಲು ಆನ್‌ಲೈನ್ ಮೂಲಕ ಮುಂಗಡವಾಗಿ ಸ್ಥಳ ಕಾಯ್ದಿರಿಸಲು ವ್ಯವಸ್ಥೆ ಕಲ್ಪಿಸಬಹುದು. ಸ್ಪರ್ಶರಹಿತ ಪಾವತಿ ವಿಧಾನ ಬಳಕೆಗೆ ಉತ್ತೇಜನ ನೀಡಬೇಕು ಎಂದು ಬಿಬಿಎಂಪಿ ಸಲಹೆ ನೀಡಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ಮುಖ್ಯ ರಸ್ತೆಗಳಲ್ಲಿ ಜನ ಗುಂಪುಗೂಡಿ ಹೊಸ ವರ್ಷಾಚರಣೆ ಆಚರಿಸುವಂತಿಲ್ಲ. ಕಟ್ಟಡ ಸಮುಚ್ಚಯಗಳಲ್ಲಿ, ಅವುಗಳ ಪ್ರಾಂಗಣಗಳಲ್ಲಿ ಹಾಗೂ ಉಪಹಾರ ಸೇವಿಸುವ ಸ್ಥಳಗಳಲ್ಲಿ ಜನ ಅಂತರ ಕಾಪಾಡಲು ವ್ಯವಸ್ಥೆ ಮಾಡಬೇಕು ಎಂದೂ ಹೇಳಿದೆ.

ಹಸಿರು ಪಟಾಕಿಗಳನ್ನು ಹೊರತಾಗಿ ಅನ್ಯ ಪಟಾಕಿ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಿದೆ.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# ಕರ್ಫ್ಯೂ: ಪಬ್–ರೆಸ್ಟೋರೆಂಟ್‌ಗಳಿಗೆ ಸಂಕಷ್ಟ

## ರೈತರಿಗೂ ತೊಂದರೆ: ವ್ಯಾಪಾರಿಗಳು, ಜನ ನಿದ್ರಿಸುವಾಗ ಕರ್ಫ್ಯೂ ಹೇರಿ ಏನು ಪ್ರಯೋಜನ– ಸಾರ್ವಜನಿಕರ ಪ್ರಶ್ನೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಮುಂದಿನ ಒಂಬತ್ತು ದಿನಗಳವರೆಗೆ ರಾತ್ರಿ 11ರಿಂದ ಬೆಳಿಗ್ಗೆ 5ರವರೆಗೆ ಕರ್ಫ್ಯೂ ವಿಧಿಸಿರುವ ರಾಜ್ಯ ಸರ್ಕಾರದ ನಿರ್ಧಾರವು ಮತ್ತೆ ನಮಗೆ ಸಂಕಷ್ಟ ತಂದೊಡ್ಡಲಿದೆ ಎಂದು ಪಬ್ ಮತ್ತು ರೆಸ್ಟೋರೆಂಟ್‌ಗಳ ಮಾಲೀಕರು ಆತಂಕ ವ್ಯಕ್ತಪಡಿಸಿದ್ದಾರೆ.

ಮಾರತ್ತಹಳ್ಳಿಯಲ್ಲಿರುವ ಬಿಗ್ ಬಾರ್ಬೆಕ್ಯು ರೆಸ್ಟೋರೆಂಟ್‌ನ ಮಾಲೀಕ ಉದಯ ಮೊಗವೀರ, ‘ಈ ಹಿಂದಿನ ಲಾಕ್‌ಡೌನ್‌ಗಳಿಂದಲೇ ನಾವು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದೇವೆ. ಕ್ರಿಸ್‌ಮಸ್ ಮತ್ತು ಹೊಸವರ್ಷದ ಸಂದರ್ಭದಲ್ಲಿ ಹೆಚ್ಚು ವ್ಯಾಪಾರ-ವಹಿವಾಟು ನಡೆಯುವ ನಿರೀಕ್ಷೆ ಇತ್ತು. ಈಗ ರಾತ್ರಿ ಕರ್ಫ್ಯೂ ಜಾರಿ ಮಾಡಿರುವುದರಿಂದ ಅದಕ್ಕೂ ಕಲ್ಲು ಬೀಳಲಿದೆ’ ಎಂದು ಅಸಮಾಧಾನ ವ್ಯಕ್ತಪಡಿಸಿದರು.

‘ಕ್ರಮೇಣ ವ್ಯಾಪಾರ ವೃದ್ಧಿಸಿತ್ತು. ಹೊಸ ಆದೇಶದಿಂದ ನಾವು ಊಟ ಸರಬರಾಜು ಮಾಡುವುದನ್ನು ರಾತ್ರಿ 8ಕ್ಕೇ ಮುಕ್ತಾಯಗೊಳಿಸಬೇಕಾಗುತ್ತದೆ. ಆದರೆ, ನಮ್ಮಲ್ಲಿ ಗ್ರಾಹಕರು ಬರುವುದೇ ರಾತ್ರಿ 8ರ ನಂತರ’ ಎಂದು ಅವರು ಹೇಳಿದರು.

ಕೋರಮಂಗಲದ ಕೆಬಪ್ಪಿ ರೆಸ್ಟೋರೆಂಟ್‌ನ ಮಾಲೀಕ ಆಸಿಮ್ ಶಾ, ‘ಅನೇಕ ಮಹಿಳಾ ಉದ್ಯೋಗಿಗಳು ನಮ್ಮಲ್ಲಿ ಕೆಲಸ ಮಾಡುತ್ತಾರೆ. ಈಗ ಉದ್ಯೋಗಿಗಳ ಪಾಳಿಯನ್ನೇ ಬದಲಿಸಬೇಕಾಗಿದೆ. ಕರ್ಫ್ಯೂನಿಂದ ಮಹಿಳೆಯರಿಗೆ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಬೇಕಾಗಿದೆ’ ಎಂದು ಅವರು ಹೇಳಿದರು.

‘ಹಬ್ಬಕ್ಕೆ ಹೊಸ ಮೆನು ಸಿದ್ಧಮಾಡಿಕೊಂಡಿದ್ದೆವು. ಈ ಕರ್ಫ್ಯೂನಿಂದ ಆ ನಿರ್ಧಾರದಿಂದಲೂ ಹಿಂದೆ ಸರಿಯಬೇಕಾಗಿದೆ’ ಎಂದು ಹೇಳಿದರು.

‘ಹೊಸ ವರ್ಷಾಚರಣೆಯನ್ನು ರಾತ್ರಿ 8ರಿಂದ ಆರಂಭಿಸಬೇಕು ಎಂದುಕೊಂಡಿದ್ದೆವು. ಈಗ ಮಧ್ಯಾಹ್ನ 3ರಿಂದಲೇ ಆರಂಭ ಮಾಡುತ್ತೇವೆ. ರಾತ್ರಿ 9.30ಕ್ಕೆ ಮುಕ್ತಾಯ ಮಾಡುತ್ತೇವೆ’ ಎಂದು ಇಂಪ್ರೆಸಾರಿಯೊದ ಮಾರುಕಟ್ಟೆ ವಿಭಾಗದ ಮುಖ್ಯಸ್ಥ ರಣವೀರ್ ಸಭಾನಿ ಹೇಳುತ್ತಾರೆ.

**ಹೋಟೆಲ್ ಸಂಘಗಳಿಂದ ಸ್ವಾಗತ:** ‘ಕೋವಿಡ್‌ನಂತಹ ಸಂದರ್ಭದಲ್ಲಿ ಸಾರ್ವಜನಿಕ ಆರೋಗ್ಯ ರಕ್ಷಣೆಗೆ ಆದ್ಯತೆ ನೀಡಬೇಕಾಗುತ್ತದೆ. ಕರ್ಫ್ಯೂ ಜಾರಿ ಮಾಡುವ ಸರ್ಕಾರದ ನಿರ್ಧಾರವನ್ನು ನಾವು ತುಂಬು ಹೃದಯದಿಂದ ಸ್ವಾಗತಿಸುತ್ತೇವೆ’ ಎಂದು ರಾಜ್ಯ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಚಂದ್ರಶೇಖರ್ ಹೆಬ್ಬಾರ್ ಹೇಳಿದ್ದಾರೆ.

### ತರಕಾರಿ–ಹಣ್ಣು ವರ್ತಕರಿಗೂ ಚಿಂತೆ

ಕೆ.ಆರ್. ಮಾರುಕಟ್ಟೆ, ಕಲಾಸಿಪಾಳ್ಯದಂತಹ ಮಾರುಕಟ್ಟೆಗಳಲ್ಲಿ ತರಕಾರಿ–ಹಣ್ಣು ಮಾರಾಟಗಾರರನ್ನೂ ರಾತ್ರಿ ಕರ್ಫ್ಯೂ ಚಿಂತೆಗೀಡು ಮಾಡಿದೆ.

‘ಮಾರುಕಟ್ಟೆಗೆ ಹೊರಗಡೆಯಿಂದ ಹಣ್ಣು-ತರಕಾರಿ ಬರುವುದೇ ಮಧ್ಯ ರಾತ್ರಿ ನಂತರ. ಕರ್ಫ್ಯೂದಿಂದ ಹಣ್ಣು-ತರಕಾರಿಗಳ ಆಂತರಿಕ ಪೂರೈಕೆ ವ್ಯವಸ್ಥೆಯಲ್ಲಿಯೇ ಏರು-ಪೇರು ಉಂಟಾಗಲಿದೆ’ ಎಂದು ತರಕಾರಿಗಳ ಸಗಟು ವ್ಯಾಪಾರಿ ಮಂಜುನಾಥ್ ಹೇಳುತ್ತಾರೆ.

‘ಹಣ್ಣು-ತರಕಾರಿಯಂತಹ ಅಗತ್ಯ ವಸ್ತುಗಳನ್ನು ಸಾಗಿಸುವ ವಾಹನಗಳ ಸಂಚಾರಕ್ಕೆ ಸರ್ಕಾರವೇನೋ ಅನುಮತಿ ನೀಡಿದೆ. ಆದರೆ, ಈ ಸರಕುಗಳನ್ನು ವಾಹನಗಳಿಗೆ ಹೇರಲು, ಇಳಿಸಲು ಕೂಲಿ ಕಾರ್ಮಿಕರು ಬೇಕಾಗುತ್ತಾರೆ. ಆದರೆ, ನಮ್ಮ ಕಾರ್ಮಿಕರಿಗೆ ಯಾವುದೇ ಗುರುತಿನ ಚೀಟಿ ಇಲ್ಲ. ಬೆಳಿಗ್ಗೆ 5ಗಂಟೆಗೆ ಕರ್ಫ್ಯೂ ಅವಧಿ ಮುಗಿಯುತ್ತದೆಯಾದರೂ ಅಷ್ಟರೊಳಗೆ ತರಕಾರಿಗಳನ್ನೆಲ್ಲ ವಿಂಗಡಿಸಿ, ಬೇರೆ ಬೇರೆ ಸ್ಥಳಗಳಿಗೆ ಸಾಗಿಸುವ ಕೆಲಸ ಮುಗಿಸಲು ಆಗುವುದಿಲ್ಲ’ ಎಂದು ಅವರು ಹೇಳಿದರು.

ಮತ್ತೊಬ್ಬ ವರ್ತಕ ಶ್ರೀಧರ್, ‘ವರ್ತಕರಿಗೆ ಮಾತ್ರವಲ್ಲದೆ, ರೈತರಿಗೂ ಈ ಕರ್ಫ್ಯೂವಿನಿಂದ ತೊಂದರೆಯಾಗಲಿದೆ. ಜಿಲ್ಲೆಯಿಂದ ಜಿಲ್ಲೆಗೆ ಸರಕು ಸಾಗಿಸುವುದೂ ವಿಳಂಬವಾಗುತ್ತದೆ. ರಾತ್ರಿ ವೇಳೆಯೇ ವಿವಿಧೆಡೆಯಿಂದ ದಿನಕ್ಕೆ 300ರಿಂದ 400 ವಾಹನಗಳು ನಗರಕ್ಕೆ ಬರುತ್ತವೆ’ ಎಂದು ಅವರು ಹೇಳಿದರು.

‘ಜನ ನಿದ್ರಿಸುವ ಸಂದರ್ಭದಲ್ಲಿ ಕರ್ಫ್ಯೂ ಹೇರಿದರೆ ಏನು ಪ್ರಯೋಜನ ?’ ಎಂದು ಪ್ರಶ್ನಿಸುವ ವರ್ತಕ ಆನಂದ್ ಗಿರಿ, ‘ಹಗಲಿನ ವೇಳೆ ಹೆಚ್ಚು ಜನ ಮಾರುಕಟ್ಟೆಯಲ್ಲಿ ಸೇರಲು ಈ ಕರ್ಫ್ಯೂ ಪರೋಕ್ಷವಾಗಿ ಅವಕಾಶ ಮಾಡಿಕೊಟ್ಟಂತಾಗುತ್ತದೆ. ಇಂತಹ ಕರ್ಫ್ಯೂಗಳು ಜನರಲ್ಲಿ ಅನಗತ್ಯ ಆತಂಕ ಸೃಷ್ಟಿಸುವುದಲ್ಲದೆ, ಎಲ್ಲರೂ ಒಮ್ಮೆಗೆ ಮಾರುಕಟ್ಟೆಗೆ ನುಗ್ಗುವಂತೆ ಮಾಡಿ ಸೋಂಕು ಹೆಚ್ಚಾಗಲು ಕಾರಣವಾಗುತ್ತವೆ’ ಎಂದು ಅಭಿಪ್ರಾಯಪಟ್ಟರು.

### ಅನಗತ್ಯ ಸಂಚರಿಸಿದರೆ ಪ್ರಕರಣ



ಕೊರೊನಾ ನಿಯಂತ್ರಣಕ್ಕಾಗಿ ಒಂಬತ್ತು ದಿನಗಳವರೆಗೆ ನಿಷೇಧಾಜ್ಞೆ ಜಾರಿಯಾಗಲಿದೆ. ಹಾಗಾಗಿ, ಸಾರ್ವಜನಿಕರು ಸೂಕ್ತ ಕಾರಣ ಹಾಗೂ ದಾಖಲೆಗಳಿಲ್ಲದೆ ರಾತ್ರಿ ವೇಳೆ ಸಂಚರಿಸಲು ಅನುಮತಿ ನೀಡುವುದಿಲ್ಲ ಎಂದು ಪೊಲೀಸ್ ಇಲಾಖೆ ಎಚ್ಚರಿಸಿದೆ.

‘ರಾಜ್ಯ ಸರ್ಕಾರದ ನಿರ್ದೇಶನಗಳ ಅನ್ವಯ ನಿಷೇಧಾಜ್ಞೆ ನಿಯಮಗಳನ್ನು ಜಾರಿ ಮಾಡಲಾಗುವುದು. ಡಿ.25ರ ಬಳಿಕ ಕೆಲವು ಸ್ಥಳಗಳಲ್ಲಿ ಹೆಚ್ಚು ಜನಸಂದಣಿಯಾಗದಂತೆ ತಡೆಯಲು ಇಲಾಖೆಯಿಂದ ಈಗಾಗಲೇ ಸಿದ್ಧತೆಗಳು ನಡೆದಿವೆ. ಗುರುವಾರ ಸಂಜೆ ವೇಳೆಗೆ ಸರ್ಕಾರದ ಮಾರ್ಗಸೂಚಿಗಳ ಅನ್ವಯ ನಿಯಮಗಳನ್ನು ಜಾರಿ ಮಾಡಲಿದ್ದೇವೆ’ ಎಂದು ನಗರ ಪೊಲೀಸ್ ಕಮಿಷನರ್ ಕಮಲ್ ಪಂತ್ ‘ಪ್ರಜಾವಾಣಿ’ಗೆ ತಿಳಿಸಿದರು.

‘ಕಡಿಮೆ ಅವಧಿಯ ನಿಷೇಧಾಜ್ಞೆ ಆಗಿರುವುದರಿಂದ ರಾತ್ರಿ ವೇಳೆ ಸಾರ್ವಜನಿಕರ ತುರ್ತು ಸಂಚಾರಕ್ಕೆ ಪಾಸ್ ನೀಡುವುದಿಲ್ಲ. ಅವರು ಸೂಕ್ತ ದಾಖಲೆಗಳನ್ನು ತೋರಿಸಬೇಕು. ಇಲ್ಲದಿದ್ದಲ್ಲಿ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು’ ಎಂದೂ ಎಚ್ಚರಿಸಿದರು.

‘ನಗರದಾದ್ಯಂತ ನಾಕಾಬಂದಿ ಹಾಕಲಾಗುವುದು. ಅನಗತ್ಯವಾಗಿ ವಾಹನಗಳಲ್ಲಿ ಸಂಚರಿಸುವವರು ಪತ್ತೆಯಾದಲ್ಲಿ, ಅವರ ವಿರುದ್ಧ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ (ಎನ್‌ಡಿಎಂಎ) ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಳ್ಳಲಾಗುವುದು’ ಎಂದು ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

ಕನ್ನಡಪ್ರಭ

# ಕಸ ಮಂಡಳಿ, ಭೂಸಾರಿಗೆ ಸೆಸ್ ವಿರುದ್ಧ ಪ್ರತಿಭಟನೆ

**ಬೆಂಗಳೂರು:** ಕೋವಿಡ್ ಆರ್ಥಿಕ ಸಂಕಷ್ಟದ ಸಂದರ್ಭದಲ್ಲಿ ಪ್ರತ್ಯೇಕ ಕಸ ಮಂಡಳಿ, ಕಸ ಸಂಗ್ರಹಕ್ಕೆ ಸೇವಾ ಶುಲ್ಕ ಹಾಗೂ ಭೂ ಸಾರಿಗೆ ಸೆಸ್ ವಿಧಿಸುವ ಪ್ರಸ್ತಾವನೆಯನ್ನು ಕೈಬಿಡಬೇಕು ಎಂದು ಭಾರತ ಕಮ್ಯೂನಿಸ್ಟ್ ಪಕ್ಷ (ಎಂ) ಸದಸ್ಯರು ಬಿಬಿಎಂಪಿ ಕೇಂದ್ರ ಕಚೇರಿಯ ಆವರಣದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಸಿಪಿಎಂ ಕಾರ್ಯದರ್ಶಿ ಎನ್.ಪ್ರತಾಪ್ ಸಿಂಹ, ಕಸ ಸಂಗ್ರಹಕ್ಕೆ ಸೇವಾ ಶುಲ್ಕ, ಭೂ ಸಾರಿಗೆ ಸೆಸ್, ಕಟ್ಟಡಗಳ ನಿರ್ಮಾಣ ಮೂಲ ನಕ್ಷೆ ಮಂಜೂರಾತಿ ಶುಲ್ಕ ಹೆಚ್ಚಳ ಪ್ರಸ್ತಾವನೆಗಳ ಮೂಲಕ ಸಾರ್ವಜನಿಕರಿಗೆ ಆರ್ಥಿಕ ಹೊರೆ ಹೊರಿಸಲು ಸರ್ಕಾರ ಮತ್ತು ಪಾಲಿಕೆ ಮುಂದಾಗಿದೆ ಎಂದು ದೂರಿದರು. ಪ್ರತಿಭಟನಾಕಾರರಿಂದ ಮನವಿ ಪತ್ರ ಸ್ವೀಕರಿಸಿ ಮಾತನಾಡಿದ ಬಿಬಿಎಂಪಿ ಘನ ತ್ಯಾಜ್ಯ ವಿಭಾಗದ ವಿಶೇಷ ಆಯುಕ್ತ ಡಿ.ರಂದೀಪ್, ಕಸ ಸೇವಾ ಶುಲ್ಕ ವಿಧಿಸುವ ಪ್ರಸ್ತಾವನೆ ಕೈಬಿಡಲಾಗಿದೆ. ಉಳಿದ ವಿಚಾರಗಳನ್ನು ಬಿಬಿಎಂಪಿ ಆಡಳಿತಾಧಿಕಾರಿ, ಆಯುಕ್ತರ ಗಮನಕ್ಕೆ ತರಲಾಗುವುದು ಎಂದರು.

ಕನ್ನಡಪ್ರಭ

# ಗೊಬ್ಬರ ತಯಾರಿ ಬಗ್ಗೆ ಅರಿವು ಮೂಡಿಸಲು ಕಲಿಕಾ ಕೇಂದ್ರ

ಬೆಂಗಳೂರು: ಹಸಿ ತ್ಯಾಜ್ಯ ಸಂಸ್ಕರಣೆ ಹಾಗೂ ಮನೆಯಲ್ಲಿಯೇ ಗೊಬ್ಬರ ತಯಾರಿಕೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಪ್ರತಿ ವಲಯಕ್ಕೆ ಒಂದು ಕಲಿಕಾ ಕೇಂದ್ರ ಆರಂಭಿಸುವಂತೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಘನತ್ಯಾಜ್ಯ ವಿಭಾಗದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.



'ಬೆಂಗಳೂರು ಮಿಷನ್-2022'ಗೆ ಸಂಬಂಧಿಸಿದಂತೆ ಘನತ್ಯಾಜ್ಯ ವಿಭಾಗದ ಅಧಿಕಾರಿಗಳೊಂದಿಗೆ ಬುಧವಾರ ಸಭೆ ನಡೆಸಿದ ಅವರು, ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಸ್ವಚ್ಛಾಗ್ರಹ ಸಂಸ್ಥೆಯ ಹಸಿ ಕಸದಿಂದ ಮನೆಯಲ್ಲಿಯೇ ಗೊಬ್ಬರ ಉತ್ಪಾದನೆ ಬಗ್ಗೆ ನಾಗರಿಕರಲ್ಲಿ ಅರಿವು ಮೂಡಿಸುವ 'ಕಲಿಕಾ ಕೇಂದ್ರ'ದ ಮಾದರಿಯಲ್ಲಿ ವಲಯಕ್ಕೆ ಒಂದು ಕಲಿಕಾ ಕೇಂದ್ರ ಸ್ಥಾಪಿಸಿ. ಎಂಟು ವಲಯ ಅಧೀಕ್ಷಕ ಎಂಜಿನಿಯರ್‌ಗಳು ಈ ಕಲಿಕಾ ಕೇಂದ್ರಕ್ಕೆ ಭೇಟಿ ನೀಡಿ, ಅಧ್ಯಯನ ನಡೆಸಿ ಕಲಿಕಾ ಕೇಂದ್ರ ತೆರೆಯಲು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.

ಒಂದೇ ಸೂರಿನಡಿ ಘನತ್ಯಾಜ್ಯ ಪ್ರಕ್ರಿಯೆಗಳ ಮೇಲೆ ನಿಗಾವಹಿಸಬೇಕು, ತ್ಯಾಜ್ಯ ಭೂ ಭರ್ತಿ ಪ್ರದೇಶದಲ್ಲಿ ಬಯೋ ಮೈನಿಂಗ್‌ಗೆ ನುರಿತ ತಂತ್ರಜ್ಞರ ನಿಯೋಜನೆ ಕ್ರಮ ಕೈಗೊಳ್ಳುವಂತೆ ಅವರು ನಿರ್ದೇಶಿಸಿದ್ದಾರೆ. ಪಾಲಿಕೆ ಘನತ್ಯಾಜ್ಯ ವಿಭಾಗದ ವಿಶೇಷ ಆಯುಕ್ತ ರಂದೀಪ್, ಜಂಟಿ ಆಯುಕ್ತ ಸರ್ಫರಾಜ್ ಖಾನ್, ಮುಖ್ಯ ಎಂಜಿನಿಯರ್ ವಿಶ್ವನಾಥ್, ಬಸವರಾಜ್ ಕಬಾಡೆ ಮೊದಲಾದವರು ಇದ್ದರು.

ಕನ್ನಡಪ್ರಭ Thu, 24 December 2020
https://kpepaper.asianetnews.

ಕನ್ನಡಪ್ರಭ

ಪತ್ತೆ | ಸೋಮವಾರ ಬಂದ 211 ಜನರ ಪೈಕಿ 45 ವರ್ಷದ ವ್ಯಕ್ತಿಗೆ ಸೋಂಕು | ಇನ್ನೂ 17 ಜನರು ಸಂಪರ್ಕಕ್ಕೆ ಸಿಗುತ್ತಿಲ್ಲ: ಬಿಬಿಎಂಪಿ ಮಾಹಿತಿ

# ಬ್ರಿಟನ್‌ನಿಂದ ಬಂದ 3 ಮಂದಿಗೆ ಕೊರೋನಾ ಸೋಂಕು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬ್ರಿಟನ್‌ನಿಂದ ಬೆಂಗಳೂರಿಗೆ ಸೋಮವಾರ ಬಂದ 211 ಮಂದಿಯ ಪೈಕಿ 45 ವರ್ಷದ ಒಬ್ಬರಿಗೆ ವ್ಯಕ್ತಿಗೆ ಕೋವಿಡ್ ಸೋಂಕು ಇರುವುದು ಪತ್ತೆಯಾಗಿದ್ದು, ಈ ಮೂಲಕ ಒಟ್ಟು ಮೂರು ಮಂದಿಗೆ ಕೋವಿಡ್ ಸೋಂಕು ಕಾಣಿಸಿಕೊಂಡಾಗಿದೆ. ಉಳಿದ ಎಲ್ಲ ಪ್ರಯಾಣಿಕರ ಕೋವಿಡ್ ಪರೀಕ್ಷಾ ವರದಿ ನೆಗೆಟಿವ್ ಬಂದಿದೆ ಎಂದು ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದರು.

ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ರಿಟನ್‌ನಿಂದ ಬೆಂಗಳೂರಿಗೆ ಸೋಮವಾರ ಆಗಮಿಸಿದ 211 ಪ್ರಯಾಣಿಕರ ಪೈಕಿ 181 ಮಂದಿಗೆ ಆರ್‌ಟಿಪಿಸಿಆರ್ ಪರೀಕ್ಷೆ ನಡೆಸಲಾಗಿದೆ. ಈ ಪೈಕಿ ಮಂಗಳವಾರ ಬೊಮ್ಮನಹಳ್ಳಿ ಇಬ್ಬರಲ್ಲಿ ಸೋಂಕು ಕಾಣಿಸಿಕೊಂಡಿತ್ತು. ಅವರನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ. 17 ಪ್ರಯಾಣಿಕರು ಸಂಪರ್ಕಕ್ಕೆ ದೊರೆಯುತ್ತಿಲ್ಲ. ಇನ್ನುಳಿದವರಲ್ಲಿ ಕೆಲವರು ಹೊರರಾಜ್ಯ ಹಾಗೂ ಹೊರ ಜಿಲ್ಲೆಗಳಿಗೆ ಪ್ರಯಾಣ ಮಾಡಿದ್ದು, ಅವರ ವಿವರವನ್ನು ಸಂಬಂಧಪಟ್ಟವರಿಗೆ ನೀಡಲಾಗಿದೆ. ಮತ್ತೆ ಕೆಲವರ ಹೆಸರು ಪುನಾರಾವರ್ತನೆ ಆಗಿದೆ ಎಂದು ತಿಳಿಸಿದರು.

ಬುಧವಾರ ಎಲ್ಲ ಪ್ರಯಾಣಿಕರ ಕೋವಿಡ್ ಪರೀಕ್ಷಾ ವರದಿ ಬಂದಿದ್ದು, ಪಶ್ಚಿಮ ವಲಯದ ವ್ಯಾಪ್ತಿಯ 45 ವರ್ಷ ಒಬ್ಬ ಪುರುಷನಿಗೆ ಸೋಂಕು ಇರುವುದು ಪತ್ತೆಯಾಗಿದೆ. ಅವರ ಸಂಪರ್ಕಿತರು ಮಾಹಿತಿ ಪಡೆಯಲಾಗುತ್ತಿದೆ ಎಂದು ವಿವರಿಸಿದರು.

ಕೋವಿಡ್ ಪರೀಕ್ಷೆಗೆ ಒಳಗಾದ ಎಲ್ಲರಿಗೂ ಏಳು ದಿನ ಕಡ್ಡಾಯ ಹೋಂ ಕ್ವಾರಂಟೈನ್‌ಗೆ ಸೂಚಿಸಲಾಗಿದೆ. ನಿಗಾ ವಹಿಸುವುದಕ್ಕೆ ಪ್ರತ್ಯೇಕ ತಂಡ ರಚನೆ ಮಾಡಲಾಗಿದೆ. ಪ್ರತಿ ಎರಡು ದಿನಕ್ಕೆ ಒಂದು ಬಾರಿ ಬ್ರಿಟನ್ ನಿಂದ ಆಗಮಿಸಿದ ಪ್ರಯಾಣಿಕರ ಆರೋಗ್ಯ ಪರೀಕ್ಷೆಗೆ ಸೂಚಿಸಲಾಗಿದೆ. ಅವರ ಕುಟುಂಬ ಸದಸ್ಯರಿಗೂ ಕ್ವಾರಂಟೈನ್‌ಗೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು.



## 7 ದಿನ ನಂತರ ಮತ್ತೆ ಸೋಂಕು ಪರೀಕ್ಷೆ

ಬ್ರಿಟನ್‌ನಿಂದ ಆಗಮಿಸಿದ ಪ್ರಯಾಣಿಕರ ಪರೀಕ್ಷಾ ವರದಿ ನೆಗೆಟಿವ್ ಬಂದರೂ ಸರ್ಕಾರದ ಸೂಚನೆಯಂತೆ ಏಳು ದಿನದ ಬಳಿಕ ಮತ್ತೊಂದು ಬಾರಿ ಸೋಂಕು ಪರೀಕ್ಷೆ ನಡೆಸಲಾಗುವುದು ಎಂದು ವಿಶೇಷ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದರು. ಇನ್ನು ಕೋವಿಡ್ ಎರಡನೇ ಅಲೆ ಹಾಗೂ ಹೊಸ ಮಾದರಿಯ ಕೋವಿಡ್ ಸೋಂಕು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಹಾಗೂ ಆರೋಗ್ಯ ಇಲಾಖೆ ನೀಡುವ ಮಾರ್ಗಸೂಚಿಗಳನ್ನು ಬಿಬಿಎಂಪಿ ವ್ಯಾಪ್ತಿಯಲ್ಲಿಯೂ ಜಾರಿಗೊಳಿಸಲಾಗುವುದು. ಕೋವಿಡ್ ತಡೆಗೆ ನೇಮಕ ಮಾಡಿಕೊಂಡ ಆರೋಗ್ಯ ಸಿಬ್ಬಂದಿಯನ್ನು ಮಾರ್ಚ್‌ವರೆಗೆ ಮುಂದುವರೆಸುವುದಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದರು.

## ಕೇವಲ ಇಬ್ಬರು ಸೋಂಕಿಗೆ ಬಲಿ

**ಬೆಂಗಳೂರು:** ನಗರದಲ್ಲಿ ಬುಧವಾರ 550 ಜನರಿಗೆ ಕೊರೋನಾ ಸೋಂಕು ಪ್ರಕರಣ ದೃಢಪಟ್ಟಿದ್ದು, 694 ಮಂದಿ ಗುಣಮುಖರಾಗಿದ್ದಾರೆ, ಇಬ್ಬರು ಮೃತಪಟ್ಟಿದ್ದಾರೆ.

ಹೊಸ ಸೋಂಕಿನ ಪ್ರಕರಣಗಳೊಂದಿಗೆ ನಗರದಲ್ಲಿ ಈವರೆಗಿನ ಒಟ್ಟು ಸೋಂಕಿತರ ಸಂಖ್ಯೆ 3,84,366ಕ್ಕೆ ಏರಿಕೆಯಾಗಿದ್ದು, ಗುಣಮುಖರ ಸಂಖ್ಯೆ 3,71,081ಕ್ಕೆ ತಲುಪಿದೆ. ಸಕ್ರಿಯ ಪ್ರಕರಣಗಳ ಸಂಖ್ಯೆ 9002ಕ್ಕೆ ಇಳಿಕೆಯಾಗಿದ್ದು, ಈ ಪೈಕಿ ಆರೋಗ್ಯ ಗಂಭೀರ ಸ್ಥಿತಿಯಲ್ಲಿರುವ 101 ಮಂದಿಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ. ಬುಧವಾರ ನಗರದಲ್ಲಿ ಇಬ್ಬರು ಮೃತಪಡುವುದರೊಂದಿಗೆ ಈವರೆಗೆ 4,282 ಜನರು ಸಾವನ್ನಪ್ಪಿದ್ದಾರೆ.

ಕನ್ನಡಪ್ರಭ

# ಕ್ರಿಸ್‌ಮಸ್, ಹೊಸ ವರ್ಷಾಚರಣೆಗೆ ಮಾರ್ಗಸೂಚಿ

## ಚರ್ಚ್‌ಸ್ಟ್ರೀಟ್, ಎಂಜಿ, ಬ್ರಿಗೇಡ್ ರಸ್ತೆಗಳಲ್ಲಿ ಗುಂಪು ಸೇರೋದು ನಿಷಿದ್ಧ | ಅಧಿಕಾರಿಗಳಿಂದ ನಿಯಮ ಪಾಲನೆ ಪರಿಶೀಲನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೋವಿಡ್ ಮುನ್ನೆಚ್ಚರಿಕೆ ಕ್ರಮಗಳೊಂದಿಗೆ ಹೊಸ ವರ್ಷಾಚರಣೆ ಮತ್ತು ಕ್ರಿಸ್‌ಮಸ್ ಆಚರಿಸುವ ಸಂಬಂಧ ಬಿಬಿಎಂಪಿ ಮಾರ್ಗಸೂಚಿ ಬಿಡುಗಡೆ ಮಾಡಿದೆ. ಕೊರೋನಾ ಸೋಂಕು ಎರಡನೇ ಅಲೆ ಹಾಗೂ ರೂಪಾಂತರ ಕೊರೋನಾ ಸೋಂಕಿನ ಭೀತಿ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಆದೇಶದ ಅನ್ವಯ ಬಿಬಿಎಂಪಿ ಮಾರ್ಗಸೂಚಿ ಬಿಡುಗಡೆ ಮಾಡಿದೆ.



ಇದರ ಅನ್ವಯ ಚರ್ಚ್ ಸ್ಟ್ರೀಟ್, ಎಂಜಿ ರಸ್ತೆ, ಬ್ರಿಗೇಡ್ ರಸ್ತೆ ಹಾಗೂ ಈ ಪ್ರಮುಖ ರಸ್ತೆಗಳನ್ನು ಸಂಪರ್ಕಿಸುವ ಎಲ್ಲ ರಸ್ತೆಗಳು, ಕೋರಮಂಗಲ, ಇಂದಿರಾನಗರ ಹಾಗೂ ವೈಟ್‌ಫೀಲ್ಡ್ ರಸ್ತೆಗಳಲ್ಲಿ ಗುಂಪು ಸೇರುವಂತಿಲ್ಲ.

ಕೋವಿಡ್ ನಿಯಮ ಪಾಲನೆ ಪರಿಶೀಲನೆಗೆ ನೋಡಲ್ ಅಧಿಕಾರಿಗಳ ನೇಮಕ ಮಾಡಲಾಗುವುದು. ಸೋಂಕಿನ ಲಕ್ಷಣಗಳಾದ ಕೆಮ್ಮು, ಜ್ವರ ಹಾಗೂ ಗಂಟಲು ನೋವಿನ ಲಕ್ಷಣ ಇರುವವರು ಹಾಗೂ ಥರ್ಮಲ್ ಸ್ಕ್ರೀನಿಂಗ್ ಪರೀಕ್ಷೆ ವೇಳೆ ದೇಹದ ತಾಪಮಾನ 37.5 ಡಿಗ್ರಿ ಸೆಲ್ಸಿಯಸ್‌ಗಿಂತ ಜಾಸ್ತಿ ಇದ್ದರೆ ಕೂಡಲೇ ಪ್ರತ್ಯೇಕಿಸಿ ವೈದ್ಯರಿಗೆ ಮತ್ತು ಪಾಲಿಕೆಯ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಮಾರ್ಗಸೂಚಿಯಲ್ಲಿ ಸ್ಪಷ್ಟಪಡಿಸಲಾಗಿದೆ.

ದೇವಸ್ಥಾನ, ಚರ್ಚ್, ಮಸೀದಿಗಳಲ್ಲಿ ಹೆಚ್ಚು ಜನ ಸೇರದಂತೆ ಆಯೋಜಕರು ಕ್ರಮ ಕೈಗೊಳ್ಳಬೇಕು. ಹಸ್ತಲಾಘವ ಮತ್ತು ಆಲಿಂಗನ ನಿಷೇಧಿಸಿದೆ. ಪಬ್, ಹೋಟೆಲ್, ರೆಸ್ಟೋರೆಂಟ್‌ಗಳಲ್ಲಿ ಡಿಜೆ, ನೃತ್ಯ, ವಿಶೇಷ ಕಾರ್ಯಕ್ರಮ ನಿಷೇಧಿಸಿದೆ. ಪ್ರತಿನಿತ್ಯದ ಕಾರ್ಯಕ್ರಮ ನಡೆಸುವುದಕ್ಕೆ ನಿರ್ಬಂಧವಿಲ್ಲ ಎಂದು ಆಯುಕ್ತ ಮಂಜುನಾಥ ಪ್ರಸಾದ್ ತಿಳಿಸಿದ್ದಾರೆ.



ಶಿವಾಜಿನಗರದಲ್ಲಿ ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಜನರು ಖರೀದಿಯಲ್ಲಿ ತೊಡಗಿರುವುದು.

### ಬಿಬಿಎಂಪಿ ಹೇಳಿದ್ದು

- 65 ವರ್ಷಕ್ಕಿಂತ ಮೇಲ್ಪಟ್ಟ,10 ವರ್ಷದ ಒಳಗಿನ ಮಕ್ಕಳು ಮನೆಯಲ್ಲೇ ಇರಬೇಕು
- ಕ್ಲಬ್, ಬಾರ್, ರೆಸ್ಟೋರೆಂಟ್, ಹೋಟೆಲ್‌ಗಳಲ್ಲಿ ಥರ್ಮಲ್ ಸ್ಕ್ಯಾನಿಂಗ್, ಸ್ಯಾನಿಟೈಸರ್ ಕಡ್ಡಾಯ
- ಕಾಂಟ್ಯಾಕ್ಟ್ ಲೆಸ್ ಸೇವೆ ಹಾಗೂ ಆನ್‌ಲೈನ್ ಸೇವೆಗೆ ಒತ್ತು, ಇ-ಟೋಕನ್ ನೀಡಬೇಕು.
- ಡಿ.30ರಿಂದ ಜ.2ರವರೆಗೆ ಎಲ್ಲ ರೀತಿಯ ವಿಶೇಷ ಸಣ್ಣ, ದೊಡ್ಡ ಔತಣ ಕೂಟ, ಕಾರ್ಯಕ್ರಮ,ಸಭೆ, ಸಮಾರಂಭ ನಿಷೇಧ.
- ವಿಶೇಷ ಸಂಘಟಿತ ಸಭೆ ಅಥವಾ ಟಿಕೆಟ್ ಪಡೆದ ಕಾರ್ಯಕ್ರಮಕ್ಕೆ ಅವಕಾಶ ಇಲ್ಲ.
- ಉಗುಳುವುದು ನಿಷೇಧ, ಆರೋಗ್ಯ ಸೇತು ಕಡ್ಡಾಯ.
- ಮುಚ್ಚಿದ ಸ್ಥಳಗಳಲ್ಲಿ ಕೇವಲ 200 ಜನಕ್ಕೆ ಮಾತ್ರ ಅವಕಾಶ.
- ಹೆಚ್ಚು ಜನ ಸೇರದಿರಲು ಆನ್‌ಲೈನ್ ಸೇವೆ, ಟೋಕನ್ ಅಥವಾ ಸರದಿ ಸಾಲಿನ ವ್ಯವಸ್ಥೆ ಕಲ್ಪಿಸಬೇಕು.
- ವಸತಿ ಸಮುಚ್ಚಯ ಹಾಗೂ ಉಪಹಾರ ಸಭಾಂಗಣದಲ್ಲೂ ನಿಯಮ ಪಾಲನೆ ಮಾಡಬೇಕು.
- ಕಡ್ಡಾಯವಾಗಿ ಹಸಿರು ಪಟಾಕಿಯನ್ನು ಮಾತ್ರ ಬಳಸಬೇಕು
- ಹೊಸ ವರ್ಷಾಚರಣೆ ವೇಳೆ ಸಾರ್ವಜನಿಕ ಸ್ಥಳ, ಮುಖ್ಯ ರಸ್ತೆಗಳಲ್ಲಿ ಹೆಚ್ಚು ಜನ ಸೇರುವುದು ನಿಷೇಧ.
- ಉಲ್ಲಂಘನೆ ಮಾಡಿದರೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ.

VK
ವಿಜಯ ಕರ್ನಾಟಕ

# ಬೆಸ್ಕಾಂ ಕಾಮಗಾರಿಯಿಂದ ರಸ್ತೆ ಹಾಳು: ಸಂಚಾರ ದುಸ್ತರ

**ಪೀಣ್ಯ ದಾಸರಹಳ್ಳಿ:** ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಬೆಸ್ಕಾಂ ವತಿಯಿಂದ ನೆಲದಡಿ ಎಲೆಕ್ಟ್ರಿಕ್ ಕೇಬಲ್ ಅಳವಡಿಸಲಾಗುತ್ತಿದೆ. ಹೀಗಾಗಿ ಗಲ್ಲಿ ರಸ್ತೆಗಳು ಸೇರಿದಂತೆ ಮುಖ್ಯ ರಸ್ತೆಗಳನ್ನು ಅಗೆದಿದ್ದು, ಎಲ್ಲಾ ರಸ್ತೆಗಳು ಧೂಳುಮಯವಾಗಿದೆ.

''ಎಲೆಕ್ಟ್ರಿಕ್ ಕಂಬಗಳಲ್ಲಿನ ವೈರ್‌ಗಳು ಜೋತು ಬಿದ್ದಿದ್ದು, ಮಳೆ-ಗಾಳಿಗೆ ಒಂದಕ್ಕೊಂದು ತಾಗಿ ಅವಘಡಗಳು ಸಂಭವಿಸುತ್ತಿದ್ದವು. ಇದನ್ನರಿತ ಸರಕಾರ ಹಾಗೂ ಬೆಸ್ಕಾಂ ಅಧಿಕಾರಿಗಳು ನೆಲದಡಿ ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿ ಕೈಗೊಂಡಿರುವುದರಿಂದ ರಸ್ತೆಗಳನ್ನು ಅಗೆಯುತ್ತಿದ್ದಾರೆ. ಕೇಬಲ್ ಅಳವಡಿಸುವ ಕಾಮಗಾರಿ ಮುಗಿದ ಕೂಡಲೇ ರಸ್ತೆ ಗುಂಡಿಗಳನ್ನು ಮುಚ್ಚಿ ದುರಸ್ತಿ ಮಾಡಲಾಗುವುದು,'' ಎಂದು ದಾಸರಹಳ್ಳಿ ವಲಯದ ಬಿಬಿಎಂಪಿ ಜಂಟಿ ಆಯುಕ್ತ ನರಸಿಂಹಮೂರ್ತಿ ತಿಳಿಸಿದರು.

**ರಸ್ತೆಗಳು ಧೂಳುಮಯ, ನಿತ್ಯ ಸವಾರರಿಗೆ ಅಡಚಣೆ**

''ಮೈತ್ರಿ ಸರಕಾರದ ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿಗಾಗಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು 700 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದ್ದರು. ಆ ಸಮಯದಲ್ಲಿ ಕೆಲವು ಅಭಿವೃದ್ಧಿ ಕೆಲಸಗಳನ್ನು ಮಾಡಲು ಶುರು ಮಾಡಿದ್ದೆವು. ಆದರೆ ಮೈತ್ರಿ ಸರಕಾರ ಪತನದ ನಂತರ ಬಿಜೆಪಿ ಸರಕಾರ ಅಧಿಕಾರಕ್ಕೆ ಬರುತ್ತಲೇ ಅನುದಾನ ವಾಪಾಸ್ ಪಡೆಯಲಾಗಿದೆ. ಅಭಿವೃದ್ಧಿಗೆ ಹಣವಿಲ್ಲ. ಈ ಸಮಯದಲ್ಲಿ ಬೆಸ್ಕಾಂ ನವರು ಚೆನ್ನಾಗಿರುವ ರಸ್ತೆಗಳನ್ನೆಲ್ಲಾ ಅಗೆದು ಹಾಳು ಮಾಡುತ್ತಿದ್ದಾರೆ. ರಸ್ತೆ ಅಗೆದ ನಂತರ ಶೀಘ್ರ ದುರಸ್ತಿ ಮಾಡಬೇಕು,'' ಎಂದು ಶಾಸಕ ಆರ್.ಮಂಜುನಾಥ್ ಆಗ್ರಹಿಸಿದರು.



VK
ವಿಜಯ ಕರ್ನಾಟಕ

### ನಾಗಶೆಟ್ಟಿಹಳ್ಳಿಯಲ್ಲಿ ವಾಹನ ಸಂಚಾರ ಕಷ್ಟ | ಪಾದಚಾರಿಗಳಿಗೆ ನಿತ್ಯ ಕಿರಿಕಿರಿ

# ಅಂಡರ್‌ಪಾಸ್ ಕಾಮಗಾರಿಗೆ ಗ್ರಹಣ

■ **ಶೆಟ್ಟರ ಮಹಾದೇವಪ್ಪ** ಹೆಬ್ಬಾಳ

ನಾಗಶೆಟ್ಟಿಹಳ್ಳಿಯಲ್ಲಿ ರೈಲ್ವೆ ಅಂಡರ್‌ಪಾಸ್ ಕಾಮಗಾರಿ ವಿಳಂಬವಾಗಿರುವುದರಿಂದ ನಾಗರಿಕರಿಗೆ ನಿತ್ಯ ಕಿರಿಕಿರಿ ಅನುಭವಿಸುವಂತಾಗಿದೆ.

## ಇಲಾಖೆಗಳಲ್ಲಿ ಸಮನ್ವಯ ಕೊರತೆ

ನಾಗಶೆಟ್ಟಿಹಳ್ಳಿ ಮಾರ್ಗವಾಗಿ ನಿತ್ಯ 25ಕ್ಕೂ ಹೆಚ್ಚು ರೈಲುಗಳು ರಾಜ್ಯ, ಹೊರ ರಾಜ್ಯಗಳಿಗೆ ಸಂಚರಿಸುತ್ತವೆ. ನಾಗಶೆಟ್ಟಿಹಳ್ಳಿ, ಹೆಬ್ಬಾಳ ಹೊರ ವರ್ತುಲ ರಸ್ತೆ, ಭದ್ರಪ್ಪ ಲೇಔಟ್ ಮಾರ್ಗದಲ್ಲಿ ಸಂಚರಿಸುವ ವಾಹನಗಳು ನಾಗಶೆಟ್ಟಿಹಳ್ಳಿ ರೈಲ್ವೆ ಗೇಟ್ ಮೂಲಕವೇ ಹಾದು ಹೋಗುತ್ತವೆ. ಜನಸಂಖ್ಯೆ ಹೆಚ್ಚಳದಿಂದ ವಾಹನಗಳ ಸಂಚಾರವೂ ಅಧಿಕ. ಇದರ ಜತೆಗೆ ಸುಮಾರು ಐವತ್ತಕ್ಕೂ ಹೆಚ್ಚು ತಳ್ಳು ಬಂಡಿಗಳ ವ್ಯಾಪಾರಿಗಳು ನಾನಾ ಸ್ಥಳಗಳನ್ನು ತಲುಪಲು ಗೇಟಿನ ಮಧ್ಯೆ ನುಸುಳುತ್ತಾರೆ. ಅತಿ ಹೆಚ್ಚು ವಾಹನಗಳ ಕಾರಣ ಪ್ರತಿ ಬಾರಿ ರೈಲ್ವೆ ಗೇಟ್ ಹಾಕಿದಾಗಲು ಹಳಿ ದಾಟಲು ನಿಮಿಷಗಟ್ಟಲೇ ಪರದಾಡಬೇಕಾಗುತ್ತದೆ. ಸಮಸ್ಯೆ ಬಗೆಹರಿಸಲು, ನಾಲ್ಕು ವರ್ಷಗಳ ಹಿಂದೆಯೇ ಅಂಡರ್ ಪಾಸ್ ನಿರ್ಮಾಣಕ್ಕೆ ಜಾಗವನ್ನೂ ಗುರುತಿಸಿ, ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ಬಿಬಿಎಂಪಿ, ರೈಲ್ವೆ ಇಲಾಖೆ ನಡುವೆ ಸಮನ್ವಯ ಕೊರತೆಯಿಂದ ಕಾಮಗಾರಿಗೆ ಗ್ರಹಣ ಹಿಡಿದಿದೆ ಎಂದು ಸ್ಥಳೀಯರು ದೂರಿದ್ದಾರೆ.



ನಾಗಶೆಟ್ಟಿಹಳ್ಳಿ ರೈಲ್ವೆ ಗೇಟ್ ಬಳಿ ಆ್ಯಂಬುಲೆನ್ಸ್ ಸೇರಿ ಇತರೆ ವಾಹನಗಳು ಕಾಯುತ್ತಿರುವುದು.

''ರೈಲ್ವೆ ಹಳಿ ಡಬ್ಲಿಂಗ್ ಹಿನ್ನೆಲೆಯಲ್ಲಿ ರೈಲುಗಳ ಓಡಾಟ ಇನ್ನಷ್ಟು ಹೆಚ್ಚಲಿದೆ. ಸಂಚಾರ ಸಮಸ್ಯೆ ಪರಿಹರಿಸಲು ಜರೂರಾಗಿ ಅಂಡರ್ ಪಾಸ್ ಕಾಮಗಾರಿ ನಿರ್ಮಾಣ ಆಗಬೇಕಿದೆ,'' ಎಂದು ನಾಗಶೆಟ್ಟಿಹಳ್ಳಿ ನಿವಾಸಿ ಎಸ್.ನಿರಂಜನ ಒತ್ತಾಯಿಸಿದ್ದಾರೆ.

''ಕೇಂದ್ರ ಸಚಿವರು, ಸ್ಥಳೀಯ ಶಾಸಕರು ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿದ್ದರು. ಆದರೆ ಅಂಡರ್ ಪಾಸ್ ನಿರ್ಮಾಣ ಮಾತ್ರ ಆಗಿಲ್ಲ. ಇದಕ್ಕಾಗಿ ನಿರಂತರ ಮನವಿಗಳ ಹೊರತಾಗಿಯೂ ಕಾಮಗಾರಿ ನೇಪಥ್ಯಕ್ಕೆ ಸರಿದಿದೆ. ಅಧಿಕಾರಿಗಳ ಸಮನ್ವಯದ ಕೊರತೆಯಿಂದ ಸಮಸ್ಯೆ ಬಿಗಡಾಯಿಸಿದೆ,'' ಎಂದು ಪಟಾಲಪ್ಪ ಬಡಾವಣೆ ನಿವಾಸಿ ರಾಮಚಂದ್ರಪ್ಪ ಬೇಸರ ವ್ಯಕ್ತಪಡಿಸಿದರು.

VK ವಿಜಯ ಕರ್ನಾಟಕ

# ಹೆದ್ದಾರಿಯಲ್ಲಿ ಬೀದಿ ನಾಯಿಗಳ ಉಪಟಳ

■ **ವಿಕ ಸುದ್ದಿಲೋಕ** ಪೀಣ್ಯ ದಾಸರಹಳ್ಳಿ

ನಗರದ ಒಳಭಾಗದಲ್ಲಿ ಬೀದಿ ನಾಯಿಗಳ ಉಪಟಳ ಕಡಿಮೆ ಮಾಡಲು ಬೆಂಗಳೂರು ಹೊರವಲಯಕ್ಕೆ ನಾಯಿಗಳನ್ನು ತಂದು ಬಿಡಲಾಗುತ್ತಿದೆ. ಆದರೆ ಈ ನಾಯಿಗಳು ಹೆದ್ದಾರಿಗೆ ಇಳಿದು ಅಪಘಾತಗಳಿಗೆ ಎಡೆ ಮಾಡಿ ಕೊಡುತ್ತಿವೆ. ಜತೆಗೆ ನಾಗರಿಕರಲ್ಲಿ ಭೀತಿ ಹುಟ್ಟಿಸುತ್ತಿವೆ.

ಹೆದ್ದಾರಿ ಪಕ್ಕದಲ್ಲಿನ ಮಾಂಸಾಹಾರಿ ಹೋಟೆಲ್‌ಗಳು, ಮಟನ್ ಅಂಗಡಿಗಳಲ್ಲಿ ಉತ್ಪತ್ತಿಯಾಗುವ ಆಹಾರ ತ್ಯಾಜ್ಯ ತಿನ್ನಲು ಬೀದಿ ನಾಯಿಗಳು ಬರುತ್ತವೆ. ''ಅಕ್ಟೋಬರ್, ನವೆಂಬರ್ ಮತ್ತು ಡಿಸೆಂಬರ್ ತಿಂಗಳು ನಾಯಿಗಳ ಸಂತಾನೋತ್ಪತ್ತಿ ಕ್ರಿಯೆಯ ಕಾಲ. ಈ ಸಮಯದಲ್ಲಿ ನಾಯಿಗಳು ವ್ಯಗ್ರವಾಗಿರುತ್ತವೆ. ನಾಯಿಗಳು ಒಂದು ಕಡೆಯಿಂದ ಮತ್ತೊಂದು ಕಡೆಗೆ ರಸ್ತೆ ದಾಟುವಾಗ ಅಪಘಾತಗಳು ಸಂಭವಿಸುವ ಸಾಧ್ಯತೆ ಹೆಚ್ಚು. ಸೂಕ್ತ ತ್ಯಾಜ್ಯ ವಿಲೇವಾರಿಯಿಂದ ಸಮಸ್ಯೆ ತಗ್ಗಿಸಬಹುದು,'' ಎನ್ನುತ್ತಾರೆ ಪಶು ವೈದ್ಯ ಡಾ.ನಾಗರಾಜ್.



## ನಿಯಂತ್ರಣಕ್ಕೆ ಪಾಲಿಕೆ ವಿಫಲ

ನಾಯಿಗಳ ಸಂಖ್ಯೆಗೆ ಕಡಿವಾಣ ಹಾಕಲು ಪಾಲಿಕೆ ಸಂಪೂರ್ಣ ವಿಫಲವಾಗಿದೆ. ಪ್ರಾಣಿಗಳ ಸಂತಾನಶಕ್ತಿಹರಣ ಮಾಡುವ ಕಾರ್ಯವನ್ನು ಎನ್‌ಜಿಒಗಳಿಗೆ ವಹಿಸಿದ್ದು, ಅವು ಸಮರ್ಪಕ ವಾಗಿ ಕೆಲಸ ಮಾಡುತ್ತಿಲ್ಲ ಎಂಬ ದೂರುಗಳು ಕೇಳಿಬಂದಿವೆ.

VK ವಿಜಯ ಕರ್ನಾಟಕ

ಹೋಟೆಲ್, ಪಬ್, ಕ್ಲಬ್‌ಗಳಲ್ಲಿ ನಿಯಮಿತ ಚಟುವಟಿಕೆ | ಗುಂಪು ಸೇರಲು ಇಲ್ಲ ಅವಕಾಶ

# ಹೊಸ ವರ್ಷದ ಪಾರ್ಟಿಗೆ ನಿರ್ಬಂಧ

■ **ವಿಕ ಸುದ್ದಿಲೋಕ** ಬೆಂಗಳೂರು

ಹೊಸ ವರ್ಷ ಆಚರಣೆ ಹಿನ್ನೆಲೆಯಲ್ಲಿ ಡಿ.30ರಿಂದ 2021ರ ಜ.2ರವರೆಗೆ ಹೋಟೆಲ್, ಪಬ್, ರೆಸ್ಟೋರೆಂಟ್, ಕ್ಲಬ್ ಸೇರಿದಂತೆ ಇತರೆ ಸ್ಥಳ ಹಾಗೂ ಪ್ರದೇಶಗಳಲ್ಲಿ ಸಾಮಾಜಿಕ ಅಂತರವಿಲ್ಲದೆ ಹೆಚ್ಚು ಜನರು ಸೇರುವಂತಹ ಟಿಕೆಟ್ ಪಡೆದ ವಿಶೇಷ ಪಾರ್ಟಿಗಳು, ವಿಶೇಷ ಡಿಜೆ ಮತ್ತು ಡ್ಯಾನ್ಸ್ ಕಾರ್ಯಗಳನ್ನು ಸಂಪೂರ್ಣವಾಗಿ ನಿಷೇಧಿಸಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ(ಬಿಬಿಎಂಪಿ) ಆದೇಶ ಹೊರಡಿಸಿದೆ.

ಆದರೆ, ಹೋಟೆಲ್, ರೆಸ್ಟೋರೆಂಟ್, ಪಬ್, ಕ್ಲಬ್, ಕ್ಲಬ್ ಹೌಸ್‌ಗಳಲ್ಲಿ ನಿಯಮಿತ ಚಟುವಟಿಕೆಗಳನ್ನು ನಡೆಸಲು ಅನುಮತಿ ನೀಡಲಾಗಿದೆ. ಮುಚ್ಚಿದ ಸ್ಥಳಗಳಲ್ಲಿ, ಹಾಲ್ ಸಾಮರ್ಥ್ಯದ ಗರಿಷ್ಠ ಶೇ.50ರಷ್ಟು ಅಥವಾ ಸುಮಾರು 200 ಜನರು ಸೇರಲು ಅವಕಾಶ ಕಲ್ಪಿಸಿದೆ. ಮುಖ್ಯವಾಗಿ ಚರ್ಚ್ ಸ್ಟ್ರೀಟ್, ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ ಮತ್ತು ಸಮಾನಾಂತರ ರಸ್ತೆಗಳು, ಕೋರಮಂಗಲ, ಇಂದಿರಾನಗರ, ವೈಟ್‌ಫೀಲ್ಡ್ ಸೇರಿದಂತೆ ಸುತ್ತಮುತ್ತಲಿನ ಸ್ಥಳಗಳಲ್ಲಿ ಗುಂಪು ಸೇರುವುದನ್ನು ನಿಷೇಧಿಸಲಾಗಿದೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ಕೋವಿಡ್-19 ಸೋಂಕು ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಇತ್ತೀಚಿನ ದಿನಗಳಲ್ಲಿ ಹೊಸ ಸೋಂಕು ಪ್ರಕರಣಗಳು ಮತ್ತು ಮರಣ ಪ್ರಮಾಣ ಕಡಿಮೆಯಾಗುತ್ತಿದ್ದರೂ, ಯಥಾಸ್ಥಿತಿ ಕಾಯ್ದುಕೊಳ್ಳುವುದು ಮುಖ್ಯವಾಗಿದೆ. ಹಬ್ಬಗಳು ಮತ್ತು ಹೊಸ ವರ್ಷದ ಆಚರಣೆ ವೇಳೆ ನಡೆಯುವ ಕೂಟಗಳು ರೋಗ ನಿಯಂತ್ರಣಕ್ಕೆ ತೊಡಕುಂಟು ಮಾಡಲಿವೆ. ಹಾಗಾಗಿ, ಬಿಬಿಎಂಪಿ ವ್ಯಾಪ್ತಿಯಲ್ಲಿ ಹೊಸ ವರ್ಷದ ಆಚರಣೆ ಸಂದರ್ಭದಲ್ಲಿ ಸಾಮೂಹಿಕ ಕೂಟ(ಪಾರ್ಟಿ), ಬೃಹತ್ ಸಮಾರಂಭಗಳ ಆಚರಣೆಗಳನ್ನು ನಿಯಂತ್ರಿಸುವ ಮತ್ತು ನಿಷೇಧಿಸುವ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದು ಅತ್ಯವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಉಪಾಧ್ಯಕ್ಷರೂ ಆದ, ಕಂದಾಯ ಸಚಿವ ಆರ್.ಅಶೋಕ್ ಅಧ್ಯಕ್ಷತೆಯಲ್ಲಿ ಬಿಬಿಎಂಪಿ ಆಯುಕ್ತರು, ನಗರ ಪೊಲೀಸ್ ಆಯುಕ್ತರೂ ಸೇರಿದಂತೆ ನಾನಾ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಚರ್ಚಿಸಿ ಕ್ರಿಸ್‌ಮಸ್ ಮತ್ತು ಹೊಸ ವರ್ಷಾಚರಣೆ ವೇಳೆ ಅನುಸರಿಸಬೇಕಾದ ವಿಶೇಷ ಮಾರ್ಗಸೂಚಿ ಮತ್ತು ಎಸ್‌ಒಪಿಗಳನ್ನು ಬಿಬಿಎಂಪಿ ಜಾರಿಗೆ ತಂದಿದೆ.

ನಿಯಮ ಉಲ್ಲಂಘಿಸುವ ವ್ಯಕ್ತಿ ಅಥವಾ ಸಂಸ್ಥೆಗೆ ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯಿದೆ ಹಾಗೂ ಐಪಿಸಿ ಸೆಕ್ಷನ್ 188 ಅಡಿಯಲ್ಲಿ ಕಾನೂನು ಕ್ರಮದ ಜತೆಗೆ, ವಿಪತ್ತು ನಿರ್ವಹಣಾ ಕಾಯಿದೆಯಡಿ ದಂಡ ವಿಧಿಸುವುದಾಗಿ ಎಚ್ಚರಿಕೆ ನೀಡಿದೆ.



### ಹಸ್ತಲಾಘವ, ಆಲಿಂಗನಕ್ಕೆ ನಿರ್ಬಂಧ

ಕೋವಿಡ್-19 ಸಾಂಕ್ರಾಮಿಕ ಸೋಂಕು ತಡೆಗಟ್ಟಲು ಕ್ರಿಸ್‌ಮಸ್ ವೇಳೆ ಸಾರ್ವಜನಿಕರ ಹಸ್ತಲಾಘವ ಮತ್ತು ಆಲಿಂಗನಕ್ಕೂ ನಿರ್ಬಂಧ ವಿಧಿಸಿದ್ದು, ಚರ್ಚ್, ದೇವಸ್ಥಾನ, ಮಸೀದಿ ಹಾಗೂ ಇತರೆ ಧಾರ್ಮಿಕ ಸ್ಥಳಗಳಲ್ಲಿ ಒಮ್ಮೆಲೆ ಹೆಚ್ಚು ಜನರು ಸೇರದಂತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮೇಲ್ವಿಚಾರಕರು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

### ಡಿಜೆ, ನೃತ್ಯ ಕಾರ್ಯಕ್ರಮ ಆಯೋಜಿಸುವಂತಿಲ್ಲ

### ನಿಯಮ ಉಲ್ಲಂಘಿಸಿದವರ ವಿರುದ್ಧ ಕಠಿಣ ಕ್ರಮ

## ಮಾರ್ಗಸೂಚಿಗಳು

1 ಚರ್ಚ್, ದೇವಸ್ಥಾನ, ಮಸೀದಿ ಮತ್ತು ಇತರೆ ಧಾರ್ಮಿಕ ಸ್ಥಳಗಳಲ್ಲಿ ಒಮ್ಮೆಗೆ ಹೆಚ್ಚು ಜನರು ಸೇರದಂತೆ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಆಯೋಜಕರು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು.

2 ಹಬ್ಬದ ಆಚರಣೆ ವೇಳೆ ಕೋವಿಡ್-19 ಸೋಂಕು ತಡೆಗಟ್ಟಲು ಸಾರ್ವಜನಿಕರು ಹಸ್ತಲಾಘವ ಮತ್ತು ಆಲಿಂಗನ ಮಾಡುವುದನ್ನು ನಿಷೇಧಿಸಲಾಗಿದೆ.

3 ಹೊಸ ವರ್ಷಾಚರಣೆ ಸಂದರ್ಭದಲ್ಲಿ ಸಾರ್ವಜನಿಕ ಸ್ಥಳ, ಮುಖ್ಯ ರಸ್ತೆಗಳಲ್ಲಿ ಮತ್ತು ಸಾಮಾಜಿಕ ಅಂತರವಿಲ್ಲದೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವ ಪ್ರದೇಶಗಳಲ್ಲಿ ಸಂಭ್ರಮಾಚರಣೆಯನ್ನು ನಿರ್ಬಂಧಿಸಲಾಗಿದೆ.

4 ಡಿಜೆಗಳು ಮತ್ತು ನೃತ್ಯ ಮಹಡಿಗಳೊಂದಿಗೆ ವಿಶೇಷ ಕಾರ್ಯಕ್ರಮಗಳಿಗೂ ಅವಕಾಶವಿಲ್ಲ.

5 ಆಯ್ದ ರಸ್ತೆ ಮತ್ತು ಸ್ಥಳಗಳಿಗೆ ಸಂಬಂಧಿಸಿದಂತೆ ಪೊಲೀಸ್ ಆಯುಕ್ತರು ಹೆಚ್ಚಿನ ನಿರ್ಬಂಧಗಳನ್ನು ವಿಧಿಸಬಹುದು.

6 65 ವರ್ಷಕ್ಕಿಂತ ಮೇಲ್ಪಟ್ಟ ವ್ಯಕ್ತಿಗಳು, 10 ವರ್ಷದೊಳಗಿನ ಮಕ್ಕಳು, ಗರ್ಭಿಣಿಯರು ಮನೆಯಲ್ಲೇ ಇರತಕ್ಕದ್ದು.

7 ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು, ಹೋಟೆಲ್, ಮಾಲ್, ಪಬ್, ರೆಸ್ಟೋರೆಂಟ್‌ಗಳಲ್ಲಿ ಥರ್ಮಲ್ ಸ್ಕ್ರೀನಿಂಗ್ ಹಾಗೂ ಸ್ಯಾನಿಟೈಸರ್ ವ್ಯವಸ್ಥೆಯನ್ನು ಕಡ್ಡಾಯಗೊಳಿಸಲಾಗಿದೆ.

8 ಕಡ್ಡಾಯವಾಗಿ ಹಸಿರು ಪಟಾಕಿಗಳನ್ನು ಮಾತ್ರ ಹಚ್ಚಬೇಕು.

9 ಪ್ರವೇಶ ದ್ವಾರ, ವಾಹನ ನಿಲುಗಡೆ ಹಾಗೂ ಇತರೆ ಮುಖ್ಯ ಸ್ಥಳಗಳಲ್ಲಿ ಸ್ಯಾನಿಟೈಸರ್ ಕಡ್ಡಾಯವಾಗಿ ಇರುವಂತೆ ನೋಡಿಕೊಳ್ಳಬೇಕು.

10 ಎಲ್ಲಾ ಹೋಟೆಲ್, ರೆಸ್ಟೋರೆಂಟ್, ಪಬ್ ಮತ್ತು ಬಾರ್‌ಗಳಲ್ಲಿ ಮುಂಗಡ ಬುಕ್ಕಿಂಗ್ ವ್ಯವಸ್ಥೆ ಜಾರಿಗೆ ತರಬೇಕು.

11 ಪೆಂಡಾಲ್, ಫುಡ್ ಕೋರ್ಟ್, ಪ್ರದರ್ಶನಗಳಲ್ಲಿ ಕೋವಿಡ್ ಮಾನದಂಡಗಳ ಅನ್ವಯ ಸಾಮಾಜಿಕ ಅಂತರ ಕಾಪಾಡುವ ಮೂಲಕ ಆಸನ ವ್ಯವಸ್ಥೆ ಮಾಡಬೇಕು.

12 ಥರ್ಮಲ್ ಸ್ಕ್ಯಾನಿಂಗ್, ಸಾಮಾಜಿಕ ಅಂತರ ಮತ್ತು ಫೇಸ್ ಮಾಸ್ಕ್‌ಗಳನ್ನು ಧರಿಸುವುದನ್ನು ಖಚಿತಪಡಿಸಿಕೊಳ್ಳಲು ಸ್ವಯಂ ಸೇವಕರನ್ನು ನಿಯೋಜಿಸಬೇಕು.

13 ಜ್ವರ, ಕೆಮ್ಮು ಸೇರಿದಂತೆ ಇತರೆ ರೋಗ ಲಕ್ಷಣ ಕಂಡುಬಂದವರಿಗೆ ನಯವಾಗಿ ಪ್ರವೇಶ ನಿರಾಕರಿಸಬೇಕು. ರೋಗ ಲಕ್ಷಣ ಕಂಡುಬಂದ ವ್ಯಕ್ತಿಯನ್ನು ಪ್ರತ್ಯೇಕವಾಗಿರಿಸಲು ಪ್ರತ್ಯೇಕ ಕೊಠಡಿ, ತುರ್ತು ಸಂದರ್ಭಗಳಲ್ಲಿ ಆ್ಯಂಬುಲೆನ್ಸ್ ವ್ಯವಸ್ಥೆಗೆ ಕ್ರಮ ಕೈಗೊಳ್ಳಬೇಕು.

14 ಕೋವಿಡ್-19 ತಡೆಗಟ್ಟುವ ಕುರಿತು ಪೋಸ್ಟರ್‌ಗಳು, ಸ್ಟ್ಯಾಂಡೀಸ್, ಆಡಿಯೊ ಮತ್ತು ವಿಡಿಯೊಗಳನ್ನು ಕಾರ್ಯಕ್ರಮದ ಸ್ಥಳದಲ್ಲಿ ಎಲ್ಲರಿಗೂ ಕಾಣುವಂತೆ ಪ್ರದರ್ಶಿಸಬೇಕು.

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ಹೊಸ ವರ್ಷ, ಕ್ರಿಸ್‌ಮಸ್ ಆಚರಣೆಗೆ ಮಾರ್ಗಸೂಚಿ

**ಬೆಂಗಳೂರು:** ಚಳಿಗಾಲದ ವೇಳೆ ಕರೊನಾ ಸೋಂಕಿನ ಜೀವಿತಾವಧಿ ಹೆಚ್ಚಳ, ಕೋವಿಡ್ 2ನೇ ಅಲೆ ಹಾಗೂ ರೂಪಾಂತರ ಸೋಂಕು ಭೀತಿ ಹಿನ್ನೆಲೆಯಲ್ಲಿ ಈ ಬಾರಿ ಕ್ರಿಸ್‌ಮಸ್ ಹಾಗೂ ಹೊಸ ವರ್ಷಾಚರಣೆ ವೇಳೆ ಜನಸಂದಣಿ ಸೇರಬಾರದು ಎಂದು ಬಿಬಿಎಂಪಿ ಆದೇಶ ಹೊರಡಿಸಿದೆ.

ಎಲ್ಲರೂ ಕಡ್ಡಾಯವಾಗಿ ಮಾಸ್ಕ್ ಧರಿಸುವುದು, ವ್ಯಕ್ತಿಗತ ಅಂತರ, ಕೈಗಳ ಸ್ವಚ್ಛತೆ ಹಾಗೂ ಸ್ಯಾನಿಟೈಸರ್ ಬಳಕೆ ಮಾಡಬೇಕು. ನಗರದಲ್ಲಿ ಹೆಚ್ಚು ಜನಸಂದಣಿ ಪ್ರದೇಶಗಳು ಮತ್ತು ರಸ್ತೆಗಳಲ್ಲಿ ಆಚರಣೆಗಳನ್ನು ನಿಷೇಧಿಸಲಾಗಿದೆ. ನಿಯಮ ಉಲ್ಲಂಘನೆಯಾದಲ್ಲಿ ಆಯೋಜಕರು ಮತ್ತು ಅಲ್ಲಿನ ಜನರ ಮೇಲೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ ಜರುಗಿಸುವುದಾಗಿ ಆದೇಶದ ಮೂಲಕ ಎಚ್ಚರಿಕೆ ನೀಡಲಾಗಿದೆ. ಹೊಸ ವರ್ಷಾಚರಣೆ ದಿನ ಚರ್ಚ್ ಸ್ಟ್ರೀಟ್, ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಕೋರಮಂಗಲ, ಇಂದಿರಾನಗರ ಹಾಗೂ ವೈಟ್‌ಫೀಲ್ಡ್ ರಸ್ತೆಗಳಲ್ಲಿ ಜನರು ಗುಂಪು ಸೇರುವಂತಿಲ್ಲ. ಇಲ್ಲಿ ನಿಯಮ ಪಾಲನೆ ಪರಿಶೀಲಿಸಲು ನೋಡಲ್ ಅಧಿಕಾರಿಗಳ ನೇಮಕ ಮಾಡಲಾಗಿದೆ. ಈ ವೇಳೆ ಹೋಟೆಲ್, ರೆಸ್ಟೋರೆಂಟ್ ಬಾರ್‌ಗಳಿಗೆ ಆಗಮಿಸುವ ಗ್ರಾಹಕರನ್ನು ತಪಾಸಣೆ ಮಾಡಬೇಕು. ಸೋಂಕಿನ ಲಕ್ಷಣಗಳಾದ ಕೆಮ್ಮು, ಜ್ವರ ಹಾಗೂ ಗಂಟಲು ನೋವು ಇದ್ದವರು, ದೇಹದ ತಾಪಮಾನ ಹೆಚ್ಚಿದ್ದಲ್ಲಿ ಅವರ ಬಗ್ಗೆ ಪಾಲಿಕೆಗೆ ಮಾಹಿತಿ ನೀಡಬೇಕು. ಸಂಪರ್ಕರಹಿತ ಸೇವೆ, ಆನ್‌ಲೈನ್ ಸೇವೆಗೆ ಒತ್ತು ನೀಡಬೇಕು ಎಂದು ಸೂಚಿಸಲಾಗಿದೆ.

» **ಡಿ.30ರಿಂದ ಜ.2ರವರೆಗೆ ಎಲ್ಲ ಕಾರ್ಯಕ್ರಮ ನಿಷೇಧ**

**3 ದಿನ ಎಲ್ಲ ಕಾರ್ಯಕ್ರಮ ನಿಷೇಧ:** ಡಿ.30ರಿಂದ ಜ.2ರವರೆಗೆ ಎಲ್ಲ ರೀತಿಯ ವಿಶೇಷ ಔತಣ ಕೂಟ, ಸಭೆ, ಸಮಾರಂಭಗಳು ಸಂಪೂರ್ಣ ನಿಷೇಧಿಸಲಾಗಿದೆ. ಹೋಟೆಲ್, ಕ್ಲಬ್, ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ವಿಶೇಷ ಸಂಘಟಿತ ಸಭೆ ಅಥವಾ ಟಿಕೆಟ್ ಪಡೆದ ಕಾರ್ಯಕ್ರಮ ಮಾಡುವಂತಿಲ್ಲ. ಮುಚ್ಚಿದ ಸ್ಥಳಗಳಲ್ಲಿ ಶೇ.50 ಅಥವಾ 200 ಜನಕ್ಕೆ ಮಾತ್ರ ಅವಕಾಶ ನೀಡಬೇಕು. ಮನೋರಂಜನಾ ಕಾರ್ಯಕ್ರಮ ಡಿಜೆ, ಡ್ಯಾನ್ಸ್ ನಡೆಸುವಂತಿಲ್ಲ.

Bengaluru Edition
Dec 24, 2020 Page No. 9
Powered by : eReleGo.com

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

### ಅಧಿಕಾರಿಗಳಿಗೆ ಗೌರವ್ ಗುಪ್ತ ಆದೇಶ | ಹಸಿಕಸದಿಂದ ಗೊಬ್ಬರ ಮಾಡಲು ತರಬೇತಿ

# ವಲಯಕ್ಕೊಂದು ಕಲಿಕಾ ಕೇಂದ್ರ ಸ್ಥಾಪನೆ

**ಬೆಂಗಳೂರು:** ಮನೆಯಲ್ಲಿ ಉತ್ಪತ್ತಿಯಾಗುವ ಕಸದಲ್ಲಿ ಹಸಿ ತ್ಯಾಜ್ಯ ಸಂಸ್ಕರಣೆ ಹಾಗೂ ಮನೆಯಲ್ಲಿ ಗೊಬ್ಬರ ತಯಾರಿಕೆ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಬಿಬಿಎಂಪಿಯ 8 ವಲಯಗಳಲ್ಲಿ ಕಲಿಕಾ ಕೇಂದ್ರ ಅರಂಭಿಸಬೇಕು ಎಂದು ಅಧಿಕಾರಿಗಳಿಗೆ ಆಡಳಿತಾಧಿಕಾರಿ ಗೌರವ್ ಗುಪ್ತ ಸೂಚಿಸಿದ್ದಾರೆ.

'ಬೆಂಗಳೂರು ಮಿಷನ್-2022' ಕುರಿತು ಬುಧವಾರ ನಡೆದ ಸಭೆಯಲ್ಲಿ ಮಾತನಾಡಿದರು. ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಸ್ವಚ್ಛಾಗ್ರಹ ಸಂಸ್ಥೆಯು 'ಹಸಿ ಕಸದಿಂದ ಗೊಬ್ಬರ ಉತ್ಪಾದನೆ, ಮನೆಯಲ್ಲಿಯೇ ಗೊಬ್ಬರ ಉತ್ಪಾದನೆ ಬಗ್ಗೆ ನಾಗರಿಕರಲ್ಲಿ ಅರಿವು ಮೂಡಿಸುವ 'ಕಲಿಕಾ ಕೇಂದ್ರ' ಸ್ಥಾಪಿಸಿದೆ. ಇದೇ ಮಾದರಿಯಲ್ಲಿ ಪ್ರತಿ ವಲಯಗಳಿಗೊಂದು ಕೇಂದ್ರ ಸ್ಥಾಪಿಸಬೇಕು. ಈ ಬಗ್ಗೆ ವಲಯಗಳ ಅಧೀಕ್ಷಕ ಇಂಜಿನಿಯರ್‌ಗಳು ಕ್ರಮ ವಹಿಸಬೇಕು ಎಂದು ನಿರ್ದೇಶಿಸಿದರು.



ವಿಜಯವಾಣಿ

'ಬೆಂಗಳೂರು ಮಿಷನ್-2022' ಕುರಿತು ಬುಧವಾರ ನಡೆದ ಸಭೆಯಲ್ಲಿ ಪಾಲಿಕೆ ಆಡಳಿತಾಧಿಕಾರಿ ಗೌರವ್ ಗುಪ್ತ ಮತ್ತಿತರರಿದ್ದರು.

**ಘನತ್ಯಾಜ್ಯ ಮಾಹಿತಿಗೆ ವೇದಿಕೆ:** ನಗರದಲ್ಲಿ 5 ಸಾವಿರ ಟನ್ ತ್ಯಾಜ್ಯ ಉತ್ಪಾದನೆ ಆಗುತ್ತಿದ್ದು, ವಿಲೇವಾರಿ ಮಾಡುವಲ್ಲಿ ಕೆಲವು ಸಮಸ್ಯೆಗಳಿವೆ. ಎಲ್ಲ ಮಾಹಿತಿಗಳು ಒಂದು ವೇದಿಕೆಯಲ್ಲಿ ಲಭ್ಯವಾಗುತ್ತಿಲ್ಲ. ಘನ ತ್ಯಾಜ್ಯ ಪ್ರಕ್ರಿಯೆ ಮೇಲೆ ನಿಗಾ ವಹಿಸಲು, ಬ್ಲಾಕ್‌ಸ್ಪಾಟ್‌ಗಳ ದೂರುಗಳಿಗೆ ಸ್ಪಂದಿಸುವುದು, ಕಸ ವಿಲೇವಾರಿ ವಾಹನಗಳಿಗೆ ಜಿಪಿಎಸ್ ಅಳವಡಿಕೆ ಮತ್ತು ನಿಯಂತ್ರಣ ತಂತ್ರಜ್ಞಾನದ ಬಗ್ಗೆ ಮಾಹಿತಿ ನೀಡಲು ವೇದಿಕೆ ರೂಪಿಸಬೇಕು ಎಂದರು.

**ಜಾಗೃತಿ ಮೂಡಿಸಿ:** ಎಲ್ಲ ವಾರ್ಡ್‌ಗಳು ಮತ್ತು ಸಮುದಾಯ ಹಂತದಲ್ಲಿ ಹಸಿ ಮತ್ತು ಒಣ ಕಸ ಬೇರ್ಪಡಿಸುವಿಕೆ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಗೌರವ್ ಗುಪ್ತ ಸೂಚನೆ ನೀಡಿದರು.

## ಕಮಾಂಡ್ ಕಂಟ್ರೋಲ್ ರೂಂ ಸ್ಥಾಪನೆ

ಬಿಬಿಎಂಪಿ ವ್ಯಾಪ್ತಿಯಲ್ಲಿ 7 ತ್ಯಾಜ್ಯ ಸಂಸ್ಕರಣಾ ಘಟಕಗಳಿದ್ದು, ಸಾಮರ್ಥ್ಯ ಹೆಚ್ಚಿಸಲಾಗುವುದು. ಕಸ ಸಂಗ್ರಹಣೆ ವಾಹನಗಳನ್ನು ತಂತ್ರಜ್ಞಾನದ ಮೂಲಕ ನಿಗಾವಹಿಸಲು ಆರ್‌ಎಫ್‌ಐಡಿ ಕಾರ್ಡ್, ಜಿಪಿಎಸ್ ಅಳವಡಿಸಲಾಗುತ್ತಿದೆ. ಜತೆಗೆ, ಸಮಗ್ರವಾಗಿ ನಿರ್ವಹಣೆ ಮಾಡಲು ಕಮಾಂಡ್‌ಕಂಟ್ರೋಲ್ ಸೆಂಟರ್ ಸ್ಥಾಪನೆ ಮಾಡಲಾಗುತ್ತಿದೆ. ಇದರಿಂದ ವಾಹನಗಳ ಚಲನವಲನ ವೀಕ್ಷಿಸಲು ಮತ್ತು ಬ್ಲಾಕ್ ಸ್ಪಾಟ್‌ಗಳಲ್ಲಿ ಕಸ ಸುರಿಯದಂತೆ ಕ್ರಮ ವಹಿಸಲು ನೆರವಾಗಲಿದೆ ಎಂದು ಘನತ್ಯಾಜ್ಯ ವಿಭಾಗದ ವಿಶೇಷ ಆಯುಕ್ತ ಡಿ. ರಂದೀಪ್ ತಿಳಿಸಿದರು.

Bengaluru Edition
Dec 24, 2020 Page No. 4
Powered by : eReleGo.com

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ರಾತ್ರಿ ಕರ್ಫ್ಯೂಗೆ ಆಕ್ರೋಶ

## ಸೋಂಕು ನಿಯಂತ್ರಣಕ್ಕೆ ಕ್ರಮ ಅನಿವಾರ್ಯ | ಮುಖ್ಯಮಂತ್ರಿ ಸಮರ್ಥನೆ

**ಮೊದಲನೇ ಪುಟದಿಂದ...**

ಕೇಂದ್ರ ಸರ್ಕಾರದ ಸಲಹೆ ಹಾಗೂ ತಜ್ಞರ ಅಭಿಪ್ರಾಯದಂತೆ ರೂಪಾಂತರಿ ಕರೊನಾ ವೈರಾಣು ಸೋಂಕು ನಿಯಂತ್ರಿಸಲು ಈ ಕ್ರಮ ಅನಿವಾರ್ಯವಾಗಿದೆ ಎಂದು ಬಿಎಸ್‌ವೈ ಸಮರ್ಥಿಸಿಕೊಂಡರು. ಹೊರ ದೇಶಗಳಿಂದ ಬರುವವರು 72 ತಾಸುಗಳ ಮುಂಚೆ ಆರ್‌ಟಿಪಿಸಿಆರ್ ಪರೀಕ್ಷೆ ಮಾಡಿಸಿ, ಕರೊನಾ ನೆಗೆಟಿವ್ ವರದಿ ಪ್ರಮಾಣಪತ್ರ ಹೊಂದಿರುವುದು ಕಡ್ಡಾಯವಾಗಿದೆ. ಬೆಂಗಳೂರು ಹಾಗೂ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಕಟ್ಟುನಿಟ್ಟಿನ ಪರೀಕ್ಷೆ ಸೇರಿದಂತೆ ಅಗತ್ಯ ನಿಗಾ ವ್ಯವಸ್ಥೆ ಮಾಡಲಾಗಿದೆ ಎಂದು ಬಿಎಸ್‌ವೈ ವಿವರಿಸಿದರು. ಸಭೆಯಲ್ಲಿ ಆರೋಗ್ಯ ಸಚಿವ ಡಾ. ಕೆ.ಸುಧಾಕರ್, ತಾಂತ್ರಿಕ ಸಲಹಾ ಸಮಿತಿ ಮುಖ್ಯಸ್ಥರು ಹಾಗೂ ಸದಸ್ಯರು ಭಾಗವಹಿಸಿದ್ದರು.

» **ಉದ್ಯಮಕ್ಕೆ ನಷ್ಟವಾಗುವ ಆತಂಕ**

**ಇರುವ ನಿಯಮ ಸಾಕಿತ್ತು:** ಕ್ರಿಸ್‌ಮಸ್, ಹೊಸ ವರ್ಷಾಚರಣೆ ವೇಳೆ ಒಮ್ಮೆಲೆ 100ಕ್ಕೂ ಹೆಚ್ಚು ಜನರು ಸೇರುವುದನ್ನು ನಿಷೇಧಿಸಲಾಗಿದೆ. ಜತೆಗೆ, ಬೆಂಗಳೂರಿನ ಎಂ.ಜಿ. ರಸ್ತೆ, ಕೋರಮಂಗಲ, ಚರ್ಚ್ ಸ್ಟ್ರೀಟ್, ಕಮರ್ಷಿಯಲ್ ಸ್ಟ್ರೀಟ್‌ಗಳಲ್ಲಿ ಹೊಸ ವರ್ಷಾಚರಣೆ ಮಾಡುವುದಕ್ಕೆ ತಡೆ ಒಡ್ಡಲಾಗಿದೆ. ಈ ನಿಯಮವನ್ನೇ ಇನ್ನಷ್ಟು ಬಿಗಿ ಮಾಡಿದ್ದರೆ ಸಾಕಿತ್ತು ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

### ಕರ್ಫ್ಯೂ ವಾಪಸ್‌ಗೆ ಮನವಿ

**ಪ್ರತಿವರ್ಷ ಡಿಸೆಂಬರ್ ಕೊನೆಯ ವಾರದಲ್ಲಿ ಹೋಟೆಲ್,ರೆಸ್ಟೋರೆಂಟ್, ಪಬ್, ಬಾರ್‌ಗಳು, ಪಾರ್ಟಿ ಹಾಲ್‌ಗಳು, ಹೆಚ್ಚು ಜನಸಂದಣಿ ಸೇರುವ ಸ್ಥಳಗಳಲ್ಲಿನ ಉದ್ಯಮಗಳಿಗೆ ಹೆಚ್ಚು ವ್ಯಾಪಾರ ಆಗುತ್ತದೆ. ಆದರೆ ರಾತ್ರಿ ಕರ್ಫ್ಯೂ ಮರು ಜಾರಿಯಿಂದಾಗಿ ಆ ವ್ಯಾಪಾರಕ್ಕೂ ಕಲ್ಲು ಬಿದ್ದಂತಾಗಿದೆ. ನಿಷೇಧಾಜ್ಞೆ ಭಯದಿಂದ ಜನರು ಮನೆಯಿಂದಲೇ ಹೊರಬರದಿದ್ದರೆ ಉದ್ಯಮಕ್ಕೆ ನಷ್ಟವಾಗಲಿದೆ. ಹೀಗಾಗಿ, ನಿಷೇಧ ವಾಪಸ್ ಪಡೆಯುವಂತೆ ಉದ್ಯಮ ವಲಯದವರು ಆಗ್ರಹಿಸಿದ್ದಾರೆ.**

**ಈ ಮೊದಲೇ ಲಾಕ್‌ಡೌನ್, ರಾತ್ರಿ ಕರ್ಫ್ಯೂ ಜಾರಿಗೊಳಿಸಿದಾಗ ದುಡಿಮೆ ಇಲ್ಲದೆ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದೇವೆ. ಈಗ ಕ್ರಿಸ್‌ಮಸ್ ಮತ್ತು ಹೊಸ ವರ್ಷಾಚರಣೆ ವೇಳೆ ಸಂಜೆ 6 ಗಂಟೆ ನಂತರವೇ ಬಿಜಿನೆಸ್ ಹೆಚ್ಚಳವಾಗುತ್ತದೆ. ಹೀಗಾಗಿ, ರಾತ್ರಿ ಕರ್ಫ್ಯೂ ಬಿಟ್ಟು, ಅನ್ಯಮಾರ್ಗ ಹುಡುಕಬೇಕು.**

| **ತನ್ವೀರ್** ಓಲಾ-ಉಬರ್ ಚಾಲಕರ ಸಂಘದ ಅಧ್ಯಕ್ಷ



ಸಾಂದರ್ಭಿಕ ಚಿತ್ರ

### ಕೋಟಿ ಕೋಟಿ ನಷ್ಟ

**10 ದಿನ ರಾತ್ರಿ ಕರ್ಫ್ಯೂ ಇದ್ದಲ್ಲಿ ಕೋಟ್ಯಂತರ ರೂ.ನಷ್ಟ ಉಂಟಾಗಲಿದೆ ಎಂದು ತಜ್ಞರೊಬ್ಬರು ತಿಳಿಸಿದ್ದಾರೆ. ಮಧ್ಯಮ ವರ್ಗದ ಉದ್ಯಮ ಹಾಗೂ ಕೆಳವರ್ಗದ ಜನರ ಮೇಲೆ ಇದರ ಪರಿಣಾಮ ಹೆಚ್ಚು ಎಂಬ ಅಭಿಪ್ರಾಯವೂ ಇದೆ.**

### ಯಾರಿಗೆ ಉಪಯೋಗ?

**ಜನರು ಮಲಗಿದ ನಂತರ ರಾತ್ರಿ 11 ಗಂಟೆಯಿಂದ ಬೆಳಗ್ಗೆ 5 ಗಂಟೆವರೆಗೆ ನಿಷೇಧಾಜ್ಞೆ ಜಾರಿಗೊಳಿಸಿದಲ್ಲಿ ಯಾರಿಗೆ ಉಪಯೋಗವಾಗಲಿದೆ? ಎಲ್ಲ ವಾಹನ ಸಂಚಾರ, ಧಾರ್ಮಿಕ ಕಾರ್ಯಕ್ರಮ ಆಚರಣೆ, ವ್ಯಾಪಾರೋದ್ಯಮ, ಕೈಗಾರಿಕೆಗಳನ್ನು ಶೇ.50 ಸಿಬ್ಬಂದಿಯಿಂದ ನಡೆಸಲು ಅವಕಾಶ ಮಾಡಿಕೊಟ್ಟಿದೆ. ಎಲ್ಲ ಕಾರ್ಯಗಳಿಗೂ ಮುಕ್ತ ಅವಕಾಶ ನೀಡಿದರೆ, ನಿಷೇಧಾಜ್ಞೆಗೆ ಅರ್ಥವೇ ಇಲ್ಲದಂತಾಗುತ್ತದೆ. ರಾತ್ರಿ ನಿಷೇಧಾಜ್ಞೆಯಿಂದ ಯಾವ ರೀತಿ ಸೋಂಕು ಹರಡುವುದನ್ನು ತಡೆಗಟ್ಟಲು ಮುಂದಾಗಿದೆ ಎಂಬ ಬಗ್ಗೆ ಸ್ಪಷ್ಟತೆ ಇಲ್ಲದಂತಾಗಿದೆ.**

### ರಾತ್ರಿ ಪಾಳಿಗೆ ತೊಂದರೆ

**ಕರೊನಾದಿಂದ ಕಂಗಾಲಾಗಿದ್ದ ಸೂಕ್ಷ್ಮ, ಸಣ್ಣ, ಮಧ್ಯಮ ಕೈಗಾರಿಕೆಗಳಲ್ಲಿ ಈಗ ಚೇತರಿಕೆ ಕಾಣಿಸಿಕೊಂಡಿದ್ದು, ಆರ್ಡರ್‌ಗಳನ್ನು ಪಡೆದುಕೊಂಡು, 3 ಪಾಳಿಯಲ್ಲಿ ಶೇ.60 ಕಾರ್ಖಾನೆಗಳು ಕಾರ್ಯ ನಿರ್ವಹಿಸುತ್ತಿವೆ. ಈಗ ರಾತ್ರಿ ಕರ್ಫ್ಯೂ ಜಾರಿಗೊಳಿಸಿದರೆ 2ನೇ ಪಾಳಿ ಕೆಲಸ ಮುಗಿಸಿ ಮನೆಗೆ ಹೋಗುವ ಮತ್ತು ರಾತ್ರಿಪಾಳಿ ಕೆಲಸಕ್ಕೆ ಬರುವ ಕಾರ್ಮಿಕರಿಗೆ ತೊಂದರೆ ಆಗುತ್ತದೆ. ಕಾರ್ಖಾನೆ ಕಾರ್ಮಿಕರಿಗೆ ಪೊಲೀಸರಿಂದ ತೊಂದರೆ ಆಗದಂತೆ ಕ್ರಮವಹಿಸಿದಲ್ಲಿ ಅನುಕೂಲವಾಗಲಿದೆ ಎಂದು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷ ಕೆ.ಬಿ. ಅರಸಪ್ಪ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.**

## ಅಬಕಾರಿ ಇಲಾಖೆಗೆ ನಿತ್ಯ 30 ಕೋಟಿ ರೂ. ನಷ್ಟ

**ಬೆಂಗಳೂರು:** ರಾತ್ರಿ ಕರ್ಫ್ಯೂನಿಂದಾಗಿ ಅಬಕಾರಿ ಇಲಾಖೆಗೆ ಪ್ರತಿ ನಿತ್ಯ 30 ಕೋಟಿ ರೂ. ನಷ್ಟವಾಗಲಿದೆ ಎಂದು ಅಬಕಾರಿಸಚಿವ ಎಚ್. ನಾಗೇಶ್ ತಿಳಿಸಿದ್ದಾರೆ. ಲಾಕ್‌ಡೌನ್ ತೆರವಾದ ಬಳಿಕ ನಷ್ಟವಾಗಿದ್ದ ಆದಾಯದಲ್ಲಿ ಚೇತರಿಕೆ ಕಾಣುತ್ತಿತ್ತು. ಇದೀಗ ರಾತ್ರಿ ಕರ್ಫ್ಯೂದಿಂದ ಇಲಾಖೆಗೆ ಮತ್ತಷ್ಟು ಆದಾಯ ಖೋತಾ ಆಗಲಿದೆ. ಆದರೂ ರೂಪಾಂತರಿ ಕರೊನಾ ವೈರಸ್ ತಡೆಯುವ ಸಲುವಾಗಿ ರಾತ್ರಿ ಕರ್ಫ್ಯೂ ನಿಯಮಗಳನ್ನು ಪಾಲಿಸಲೇಬೇಕಾಗುತ್ತದೆ ಎಂದು ಅವರು ವಿಜಯವಾಣಿಗೆ ತಿಳಿಸಿದರು. ಕರ್ಫ್ಯೂ ಸಂದರ್ಭದಲ್ಲಿ ರಾತ್ರಿ 11 ಗಂಟೆ



ನಂತರ ಬಾಗಿಲು ಹಾಕದಿರುವ ಪಬ್ ಹಾಗೂ ಮದ್ಯದಂಗಡಿಗಳ ಪರವಾನಗಿಯನ್ನು ಅಮಾನತು ಮಾಡಲಾಗುವುದು. ಇಲಾಖೆಯಿಂದ ಅಧಿಕೃತ ಆದೇಶ ಹೊರಡಿಸಲು ಈಗಾಗಲೇ ಆಯುಕ್ತರಿಗೆ ಸೂಚಿಸಿದ್ದೇನೆ ಎಂದರು.

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ
ನಂ. 1 ಕನ್ನಡ ದಿನಪತ್ರಿಕೆ

## ಬ್ರಿಟನ್‌ನಿಂದ ಬಂದವರಿಗೆ ಪ್ರತಿ ಎರಡು ದಿನಕ್ಕೊಮ್ಮೆ ಪರೀಕ್ಷೆ

# ಒಬ್ಬರಿಗೆ ಮಾತ್ರ ಕರೊನಾ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬ್ರಿಟನ್‌ನಿಂದ ನಗರಕ್ಕೆ ವಿಮಾನದ ಮೂಲಕ ಆಗಮಿಸಿದ್ದ 211 ಪ್ರಯಾಣಿಕರ ಪೈಕಿ ಶೇ.80 ಜನರ ಕೋವಿಡ್ ಪರೀಕ್ಷಾ ವರದಿ ನೆಗೆಟಿವ್ ಬಂದಿದೆ. ಆದರೆ, 45 ವರ್ಷದ ವ್ಯಕ್ತಿಗೆ ಕೋವಿಡ್ ಸೋಂಕು ದೃಢಪಟ್ಟಿದ್ದು, ಅವರ ಚಿಕಿತ್ಸೆಗೆ ವಿಶೇಷ ಕ್ರಮ ವಹಿಸಲಾಗಿದೆ ಎಂದು ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದ್ದಾರೆ.

» **ಶೇ. 90 ಪ್ರಯಾಣಿಕರಿಗೆ ಕೋವಿಡ್ ನೆಗೆಟಿವ್**

ಬ್ರಿಟನ್‌ನಿಂದ ಆಗಮಿಸಿದ 211 ಪ್ರಯಾಣಿಕರ ವಿವರ ನಮ್ಮಲ್ಲಿದೆ. ಇದರಲ್ಲಿ 181 ಜನರ ಮನೆಗಳಿಗೆ ಮೊಬೈಲ್ ಘಟಕದ ಮೂಲಕ ಸಿಬ್ಬಂದಿ ತೆರಳಿ ಆರ್‌ಟಿಪಿಸಿಆರ್ ಪರೀಕ್ಷೆ ಮಾಡಿದ್ದಾರೆ. 181 ಜನರ ಫಲಿತಾಂಶ ಲಭ್ಯವಾಗಿದ್ದು, 45 ವರ್ಷದ ಒಬ್ಬರಿಗೆ ಮಾತ್ರ ಸೋಂಕು ದೃಢಪಟ್ಟಿದೆ. ಕೆಲವರು ಹೊರ ರಾಜ್ಯ ಮತ್ತು ಬೇರೆ ಜಿಲ್ಲೆಗಳಿಗೆ ತೆರಳಿದ್ದಾರೆ. ಉಳಿದಂತೆ 17 ಪ್ರಯಾಣಿಕರ ಮೊಬೈಲ್ ಸಂಖ್ಯೆ ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ಬುಧವಾರ ಸುದ್ದಿಗಾರರಿಗೆ ತಿಳಿಸಿದರು.

**ಪ್ರತಿ ವಲಯಕ್ಕೆ 5 ಮೊಬೈಲ್ ಘಟಕ:** ಬ್ರಿಟನ್‌ನಿಂದ ಬಂದ ಪ್ರಯಾಣಿಕರು ಮತ್ತು ಅವರ ಸಂಪರ್ಕಕ್ಕೆ ಬಂದ ಕುಟುಂಬ ಸದಸ್ಯರಿಗೂ 7 ದಿನಗಳ ಹೋಂ ಕ್ವಾರಂಟೈನ್‌ಗೆ ಸೂಚಿಸಲಾಗಿದೆ. ಇದರ ಬಗ್ಗೆ ನಿಗಾವಹಿಸಲು ಪ್ರತ್ಯೇಕ ತಂಡ ನಿಗದಿ ಮಾಡಲಾಗಿದೆ. 181 ಪ್ರಯಾಣಿಕರನ್ನು ಪ್ರತಿ 2 ದಿನಕ್ಕೊಮ್ಮೆ ಕೋವಿಡ್ ಪರೀಕ್ಷೆ ಮಾಡಲಾಗುತ್ತಿದೆ.

### ವೈದ್ಯರ ಸೇವೆ ಮುಂದುವರಿಕೆ

**ಕೋವಿಡ್ ಹರಡುವಿಕೆ ನಿಯಂತ್ರಣ ಮತ್ತು ನಿರ್ವಹಣೆ ಕಾರ್ಯಕ್ಕೆ ಗುತ್ತಿಗೆ ಆಧಾರದಲ್ಲಿ 6 ತಿಂಗಳ ಅವಧಿಗೆ ನೇಮಕ ಮಾಡಿಕೊಳ್ಳಲಾಗಿದ್ದ ವೈದ್ಯರನ್ನು ಮತ್ತೆ ಮುಂದುವರಿಸಲಾಗುವುದು. ಕೋವಿಡ್ 2ನೇ ಅಲೆಯ ಆತಂಕ ಕಂಡುಬಂದಿದ್ದು, ಮಾರ್ಚ್ ಮುಕ್ತಾಯದವರೆಗೂ ವೈದ್ಯರ ಗುತ್ತಿಗೆ ಅವಧಿಯನ್ನು ವಿಸ್ತರಣೆ ಮಾಡಲು ಕ್ರಮ ವಹಿಸಲಾಗಿದೆ ಎಂದು ರಾಜೇಂದ್ರ ಚೋಳನ್ ತಿಳಿಸಿದರು.**

ನೆಗೆಟಿವ್ ಬಂದರೂ 7ನೇ ದಿನ ಮತ್ತೊಂದು ಬಾರಿ ಪರೀಕ್ಷೆ ಮಾಡಲು ಸರ್ಕಾರ ಸೂಚಿಸಿದ್ದು ಪಾಲಿಸಲಾಗುವುದು. ಕೋವಿಡ್ 2ನೇ ಅಲೆ ಹಾಗೂ ಹೊಸ ಮಾದರಿ ಸೋಂಕಿನ ಬಗ್ಗೆ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಕೆ ವ್ಯಾಪ್ತಿಯಲ್ಲಿ ಪಾಲಿಸಲಾಗುವುದು ಎಂದು ತಿಳಿಸಿದರು.

**ಸಿಬ್ಬಂದಿಗೆ ಕ್ವಾರಂಟೈನ್:** ಬಿಬಿಎಂಪಿ ಆಯುಕ್ತ ಮಂಜುನಾಥಪ್ರಸಾದ್‌ಗೆ ಕರೊನಾ ದೃಢಪಟ್ಟಿರುವುದರಿಂದ 3 ದಿನಗಳಿಂದ ಆಯುಕ್ತ ಸಂಪರ್ಕದಲ್ಲಿದ್ದ ಎಲ್ಲ ಸಿಬ್ಬಂದಿಯನ್ನು ಕ್ವಾರಂಟೈನ್ ಮಾಡಲಾಗಿದೆ. ಆಯುಕ್ತರು ಭಾಗವಹಿಸಿದ್ದ ಸಭೆ-ಸಮಾರಂಭಗಳಲ್ಲಿ ವ್ಯಕ್ತಿಗತ ಅಂತರ ಕಾಪಾಡಿಕೊಂಡು ಪಾಲ್ಗೊಂಡವರಲ್ಲಿ ಸೋಂಕಿನ ಲಕ್ಷಣ ಕಂಡುಬಂದರೆ ಕೋವಿಡ್ ಪರೀಕ್ಷೆ ಮಾಡಿಸಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ರಾಜೇಂದ್ರ ಚೋಳನ್ ಮಾಹಿತಿ ನೀಡಿದರು.

Bengaluru Edition
Dec 24, 2020 Page No. 9
Powered by : eReleGo.com

ಉದಯವಾಣಿ
ಜನಮನದ ಜೀವನಾಡಿ

# ಭೂಸಾರಿಗೆ, ಬೆಟರ್‌ಮೆಂಟ್ ಶುಲ್ಕ ಪ್ರಸ್ತಾವನೆ ಕೈಬಿಡಲು ಒತ್ತಾಯ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಪ್ರತ್ಯೇಕ ಕಸ ಮಂಡಳಿ, ಕಸ ಸಂಗ್ರಹಕ್ಕೆ ಸೇವಾ ಶುಲ್ಕ ಹಾಗೂ ಭೂಸಾರಿಗೆ ಸೆಸ್ ಪ್ರಸ್ತಾವನೆಯನ್ನು ಕೈಬಿಡಬೇಕು ಎಂದು ಆಗ್ರಹಿಸಿ ಭಾರತ ಕಮ್ಯೂನಿಸ್ಟ್ ಪಕ್ಷ (ಸಿಪಿಐ) (ಎಂ) ಪಕ್ಷದ ಸದಸ್ಯರು ಬಿಬಿಎಂಪಿ ಕೇಂದ್ರ ಕಚೇರಿಯ ಆವರಣದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

ಈ ವೇಳೆ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಿಪಿಐಎಂನ ಕಾರ್ಯದರ್ಶಿ ಎನ್. ಪ್ರತಾಪ್ ಸಿಂಹ ಅವರು, ಈಗಾಗಲೇ ಕೊರೊನಾ ಸೋಂಕು ಸೃಷ್ಟಿದ ಆರ್ಥಿಕ ಸಂಕಷ್ಟದಿಂದ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭದಲ್ಲಿ ಕಸ ಸಂಗ್ರಹಕ್ಕೆ ಸೇವಾ ಶುಲ್ಕ,ಭೂಸಾರಿಗೆ ಸೆಸ್, ಕಟ್ಟಡಗಳ ನಿರ್ಮಾಣ ಮೂಲ ನಕ್ಷೆ ಮಂಜೂರಾತಿ ಹಾಗೂ ಅಭಿವೃದ್ಧಿ ಸೆಸ್ ಸೇರಿದಂತೆ ವಿವಿಧ ಪ್ರಸ್ತಾವನೆಗಳ ಆರ್ಥಿಕ ಹೊರೆಗೆ ಸರ್ಕಾರ ಮುಂದಾಗಿದೆ. ಈ ಪ್ರಸ್ತಾವನೆಗಳನ್ನು ಕೂಡಲೇ ಕೈಬಿಡಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು.

> **ಕಸ ಸೇವಾ ಶುಲ್ಕ ವಿಧಿಸುವ ಪ್ರಸ್ತಾವನೆ ಕೈಬಿಡಲಾಗಿದೆ ಎಂದು ಸರ್ಕಾರ ಈಗಾಗಲೇ ಸ್ಪಷ್ಟಪಡಿಸಿದೆ. ಉಳಿದ ವಿಚಾರಗಳನ್ನು ಬಿಬಿಎಂಪಿ ಆಡಳಿತಾಧಿಕಾರಿ ಹಾಗೂ ಆಯುಕ್ತರ ಗಮನಕ್ಕೆ ತರಲಾಗುವುದು.**
>
> • ಡಿ. ರಂದೀಪ್, ಬಿಬಿಎಂಪಿ ವಿಶೇಷ (ಘನತ್ಯಾಜ್ಯ ನಿರ್ವಹಣೆ) ಆಯುಕ್ತ

ಸಂಯುಕ್ತ ಕರ್ನಾಟಕ

# ಬ್ರಿಟನ್‌ನಿಂದ ಬೆಂಗಳೂರಿಗೆ ಬಂದವರಿಗೆ ನೆಗೆಟಿವ್

**ಸಂ.ಕ.ಸಮಾಚಾರ ಬೆಂಗಳೂರು**

ಬ್ರಿಟನ್‌ನಿಂದ ಬೆಂಗಳೂರಿನ ವಾಪಸ್ ಆಗಿದ್ದ ಬಹುತೇಕ ಪ್ರಯಾಣಿಕರ ಕೊರೊನಾ ತಪಾಸಣೆಯಲ್ಲಿ ನೆಗೆಟಿವ್ ವರದಿ ಬಂದಿದೆ.

ಇದುವರೆಗೆ ಕರ್ನಾಟಕಕ್ಕೆ ಬಂದವರಲ್ಲಿ 211 ಮಂದಿ ಬೆಂಗಳೂರಿನವರಾಗಿದ್ದು ಪೈಕಿ 45 ವರ್ಷದ ಓರ್ವ ವ್ಯಕ್ತಿಗೆ ಕೋವಿಡ್ ಸೋಂಕು ಇರುವುದು ಪತ್ತೆಯಾಗಿದ್ದು, ಶೇ.80ರಷ್ಟು ಪ್ರಯಾಣಿಕರ ಕೋವಿಡ್ ಪರೀಕ್ಷಾ ವರದಿ ನೆಗೆಟಿವ್ ಬಂದಿದೆ ಎಂದು ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ರಿಟನ್‌ನಿಂದ ಬೆಂಗಳೂರಿಗೆ ಆಗಮಿಸಿದ 211 ಪ್ರಯಾಣಿಕರ ವಿವರವನ್ನು ಸರ್ಕಾರ ನೀಡಿತ್ತು. ಈ ಪೈಕಿ 181 ಮಂದಿಗೆ ಆರ್‌ಟಿಪಿಸಿಆರ್ ಪರೀಕ್ಷೆ ನಡೆಸಲಾಗಿದೆ. 17 ಪ್ರಯಾಣಿಕರ ಮೊಬೈಲ್ ಸಂಖ್ಯೆ ಸಂಪರ್ಕಕ್ಕೆ ದೊರೆಯುತ್ತಿಲ್ಲ. ಇನ್ನುಳಿದವರಲ್ಲಿ ಕೆಲವರು ಹೊರರಾಜ್ಯ ಹಾಗೂ ಹೊರ ಜಿಲ್ಲೆಗಳಿಗೆ ಪ್ರಯಾಣ ಮಾಡಿದ್ದು ಅವರ ವಿವರವನ್ನು ಸಂಬಂಧಪಟ್ಟವರಿಗೆ ನೀಡಲಾಗಿದೆ. ಈವರೆಗೆ 101 ಪ್ರಯಾಣಿಕ ಕೋವಿಡ್ ಪರೀಕ್ಷಾ ವರದಿ ಫಲಿತಾಂಶ ಲಭ್ಯವಾಗಿದ್ದು ಪಶ್ಚಿಮ ವಲಯದ ವ್ಯಾಪ್ತಿಯ 45 ವರ್ಷ ಓರ್ವ ಪುರುಷನಿಗೆ ಸೋಂಕು ಇರುವುದು ಪತ್ತೆಯಾಗಿದೆ.



ಅವರ ಸಂಪರ್ಕಿತರ ಮಾಹಿತಿ ಪಡೆಯಲಾಗುತ್ತಿದೆ. ಇನ್ನುಳಿದ 100 ಮಂದಿ ಫಲಿತಾಂಶ ನೆಗೆಟಿವ್ ಬಂದಿದ್ದು 80 ಮಂದಿಯ ಫಲಿತಾಂಶ ಬರಬೇಕಿದೆ ಎಂದು ವಿವರಿಸಿದರು.

ಪ್ರತಿ ವಲಯದಲ್ಲಿ ಕೋವಿಡ್ ಪರೀಕ್ಷೆಯ ಮಾದರಿ ಸಂಗ್ರಹಕ್ಕೆ ತಲಾ ಐದು ಮೊಬೈಲ್ ಯುನಿಟ್ ಒಳಗೊಂಡ ತಂಡ ನಿಯೋಜಿಸಲಾಗಿದೆ. ಇನ್ನು ಕೋವಿಡ್ ಪರೀಕ್ಷೆಗೆ ಒಳಗಾದ 181 ಮಂದಿಗೂ ಏಳು ದಿನ ಕಡ್ಡಾಯ ಹೋಂ ಕ್ವಾರಂಟೈನ್‌ಗೆ ಸೂಚಿಸಲಾಗಿದೆ. ನಿಗಾವಹಿಸುವುದಕ್ಕೆ ಪ್ರತ್ಯೇಕ ತಂಡ ರಚನೆ ಮಾಡಲಾಗಿದೆ. ಪ್ರತಿ ಎರಡು ದಿನಕ್ಕೆ ಒಂದು ಬಾರಿ ಬ್ರಿಟನ್‌ನಿಂದ ಆಗಮಿಸಿದ ಪ್ರಯಾಣಿಕರ ಆರೋಗ್ಯ ಪರೀಕ್ಷೆಗೆ ಸೂಚಿಸಲಾಗಿದೆ. ಅವರ ಕುಟುಂಬ ಸದಸ್ಯರಿಗೂ ಕ್ವಾರಂಟೈನ್‌ಗೆ ಸೂಚಿಸಲಾಗಿದೆ ಎಂದು ಹೇಳಿದರು.

ಬ್ರಿಟನ್‌ನಿಂದ ಆಗಮಿಸಿದ ಪ್ರಯಾಣಿರ ಈಗಾಗಲೇ ಕೋವಿಡ್ ಪರೀಕ್ಷೆಗೆ ಒಳಪಡಿಸಲಾಗಿದೆ. ಈಗ ಪರೀಕ್ಷಾ ವರದಿ ನೆಗೆಟಿವ್ ಬಂದರೂ ಏಳು ದಿನದ ಬಳಿಕ ಮತ್ತೊಂದು ಬಾರಿ ಸೋಂಕು ಪರೀಕ್ಷೆಗೆ ರಾಜ್ಯ ಸರ್ಕಾರ ಸೂಚಿಸಿದೆ. ಅದರಂತೆ ಮತ್ತೊಂದು ಬಾರಿ ಪರೀಕ್ಷೆ ನಡೆಸಲಾಗುವುದು ಎಂದು ತಿಳಿಸಿದರು.

- **ಬ್ರಿಟನ್‌ನಿಂದ 211 ಮಂದಿ ರಾಜಧಾನಿಗೆ**
- **181 ಮಂದಿಗೆ ಆರ್‌ಟಿಪಿಸಿಆರ್ ಪರೀಕ್ಷೆ**
- **80 ಮಂದಿಯ ಫಲಿತಾಂಶ ಬರಬೇಕಿದೆ**
- **ಏಳು ದಿನದ ನಂತರ ಮತ್ತೆ ಪರೀಕ್ಷೆ**
- **ನಿಗಾ ವಹಿಸುವುದಕ್ಕೆ ಪ್ರತ್ಯೇಕ ತಂಡ**

ಹೊಸ ದಿಗಂತ

ಹೊಸ ದಿಗಂತ

12

24 Dec 2020

ಕ್ರಿಸ್‌ಮಸ್, ಧಾರ್ಮಿಕ ಪ್ರಾರ್ಥನೆಗೆ ವಿನಾಯಿತಿ | ಓಲಾ, ಉಬರ್, ಆಟೋ ಓಡಾಟಕ್ಕೆ ಅನುಮತಿ

# ರಾಜಧಾನಿಯಲ್ಲಿ ಮೋಜು ಮಸ್ತಿಗೆ ನಿರ್ಬಂಧ

**ಬೆಂಗಳೂರು:** ಕೊರೋನಾ ರೂಪಾಂತರದ ಮುನ್ನೆಚ್ಚರಿಕಾ ಕ್ರಮವಾಗಿ ರಾಜ್ಯ ಸರ್ಕಾರ ಡಿ.24 ರ ರಾತ್ರಿಯಿಂದ ನೈಟ್ ಕರ್ಫ್ಯೂಗೆ ಆದೇಶ ನೀಡಿದ್ದು, ಧಾರ್ಮಿಕ ಪ್ರಾರ್ಥನೆ ಹೊರತುಪಡಿಸಿ ಹೊಸ ವರ್ಷಾಚರಣೆಯ ಮೋಜು ಮಸ್ತಿಗಳಿಗೆ ನಿರ್ಬಂಧ ವಿಧಿಸಿದೆ.

ಕೊರೋನಾ ಮಹಾಮಾರಿ ಸೋಂಕು ದೇಶವ್ಯಾಪಿ ಹಬ್ಬಿದ ಪರಿಣಾಮ ಸರ್ಕಾರ ಸಂಪೂರ್ಣ ಲಾಕ್‌ಡೌನ್ ಜಾರಿ ಮಾಡಿತ್ತು. ಇದೀಗ ಕೊರೋನಾ ಮತ್ತೆ ಬ್ರಿಟನ್ ದೇಶದಿಂದ ರೂಪಾಂತರಗೊಂಡ ಹಿನ್ನೆಲೆ ರಾಜ್ಯ ಸರ್ಕಾರ ಮುನ್ನೆಚ್ಚರಿಕಾ ಕ್ರಮವಾಗಿ ನೈಟ್ ಕರ್ಫ್ಯೂ ಜಾರಿ ಮಾಡಿದ್ದು, ಇದು ಡಿ.24ರಿಂದ ಜ.2ರ ವರೆಗೆ ಪ್ರತಿ ದಿನ ರಾತ್ರಿ 11ರಿಂದ ಬೆಳಗ್ಗೆ 5ಗಂಟೆ ವರೆಗೆ ಜಾರಿಯಲ್ಲಿರಲಿದೆ.

ಕಂಪನಿ, ಕಾರ್ಖಾನೆಗಳಲ್ಲಿ ಶೇ.50ರಷ್ಟು ಕಾರ್ಮಿಕರು ಮಾತ್ರ ರಾತ್ರಿ ಪಾಳಿಯಲ್ಲಿ ಕೆಲಸ ಮಾಡಲು ಅನುಮತಿಸಿದೆ. ಸಾರ್ವಜನಿಕರ ಹಿತ ದೃಷ್ಟಿಯಿಂದ ದೂರದ ಊರುಗಳಿಗೆ ಪ್ರಯಾಣ ಬೆಳೆಸಲು ಬಸ್ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದ್ದು, ಬಸ್ ನಿಲ್ದಾಣ, ರೈಲು ನಿಲ್ದಾಣ, ವಿಮಾನ ನಿಲ್ದಾಣಗಳಿಗೆ ಹೋಗುವ ಸಾರ್ವಜನಿಕರನ್ನು ಕರೆದೊಯ್ಯಲು ಓಲಾ, ಉಬರ್, ಆಟೋ ಟ್ಯಾಕ್ಸಿ ಓಡಾಟಕ್ಕೆ ಅವಕಾಶ ನೀಡಲಾಗಿದೆ. ಆದರೆ, ಸಾರ್ವಜನಿಕರ ವಾಹನಗಳ ಸಂಚಾರಕ್ಕೆ ರಾತ್ರಿ 11ರಿಂದ ಬೆಳಗ್ಗೆ 5ರ ವರೆಗೆ ನಿಬಂಧಿಸಲಾಗಿದೆ.

ಕ್ರಿಸ್ಮಸ್ ಹಬ್ಬ ಸನಿಹದಲ್ಲಿರುವ ಹಿನ್ನೆಲೆ ಡಿ.24ರಂದು ರಾತ್ರಿ ನಡೆಯುವ ವಿಶೇಷ ಪ್ರಾರ್ಥನೆಗೆ ಅವಕಾಶ ಮಾಡಿಕೊಡಲಾಗಿದೆ. ಆದರೆ, ಹೊಸ ವರ್ಷ ಆಚರಣೆಗೆ ತಡೆ ಬಿದ್ದಿದ್ದು, ಯಾವುದೇ ಬಾರ್, ರೆಸ್ಟೋರೆಂಟ್, ಪಬ್, ವಿಶೇಷ ಕೂಟ, ಡಿಜೆ ಪಾರ್ಟಿ, ಗುಂಪು ಸೇರುವಿಕೆ, ಮೋಜು ಮಸ್ತಿಗೆ ನಿರ್ಬಂಧ ಹೇರಲಾಗಿದೆ.





**ಸುಗಮ ಸಾರಿಗೆ ಸಂಚಾರ**

ಕೊರೋನಾ ರೂಪಾಂತರ ಹಿನ್ನೆಲೆ ಮುಂಜಾಗ್ರತಾ ಕ್ರಮವಾಗಿ ರಾತ್ರಿ ಕರ್ಫ್ಯೂ ಜಾರಿ ಮಾಡಲಾಗಿದ್ದು, ಸಾರಿಗೆ ಸಂಚಾರದಲ್ಲಿ ಯಾವುದೇ ವ್ಯತ್ಯಾಸಗಳಾಗುವುದಿಲ್ಲ ಎಂದು ಸಾರಿಗೆ ಸಚಿವ ಲಕ್ಷ್ಮಣ ಸವದಿ ಹೇಳಿದ್ದಾರೆ. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಸೂಚನೆಯಂತೆ ಸಾರಿಗೆ ಬಸ್ ಸಂಚಾರದಲ್ಲಿ ವ್ಯತ್ಯಾಸ ಮತ್ತು ತೊಂದರೆಯಾಗದಂತೆ ನೋಡಿಕೊಳ್ಳಲಾಗುವುದು. ಜನರ ಜೀವಕ್ಕೆ ಮೊದಲ ಆದ್ಯತೆಯಾಗಿದ್ದು, ಜೀವ ಇದ್ದರೆ ಮಾತ್ರ ಎಲ್ಲವು. ಹೀಗಾಗಿ ಇಂತಹ ಸಂದರ್ಭದಲ್ಲೂ ಲಾಭ-ನಷ್ಟದ ಬಗ್ಗೆ ಲೆಕ್ಕ ಹಾಕುವುದು ಸರಿಯಲ್ಲ ಎಂದರು.

“ ಸರ್ಕಾರ ಜಾರಿ ಮಾಡಿದ ಕರ್ಫ್ಯೂವನ್ನು ಸ್ವಾಗತಿಸುತ್ತೇವೆ. ನಮ್ಮ ಎಲ್ಲಾ ವ್ಯಾಪಾರ ಸಮೂಹಗಳು ಬೆಂಬಲ ವ್ಯಕ್ತಪಡಿಸಿವೆ.

■ ಪೆರಿಕಲ್ ಎಂ.ಸುಂದರ್, ಎಫ್‌ಕೆಸಿಸಿಐ ಅಧ್ಯಕ್ಷ

“ ರಾತ್ರಿ 11ಗಂಟೆ ನಂತರ ನೈಟ್ ಕರ್ಫ್ಯೂ ಜಾರಿ ಹಾಗೂ ರಾತ್ರಿ ಪಾಳಿಯಲ್ಲಿ ಅರ್ಧದಷ್ಟು ಕಾರ್ಮಿಕರು ಕೆಲಸ ಮಾಡಲು ಅನುವು ಮಾಡಿಕೊಟ್ಟಿರುವುದು ಸಮಾಧಾನ ತಂದಿದೆ.

■ ಕೆ.ಬಿ.ಅರಸಪ್ಪ, ಕಾಸಿಯಾ ಅಧ್ಯಕ್ಷ

“ ಸಾರ್ವಜನಿಕರ ಹಿತ ದೃಷ್ಟಿಯಿಂದ ಸರ್ಕಾರ ರಾತ್ರಿ ಕರ್ಫ್ಯೂ ಜಾರಿ ಮಾಡಿದೆ. ಇದರಿಂದ ಆಟೋ ಚಾಲಕರಿಗೆ ಹೊಡೆತ ಬೀಳುವುದಿಲ್ಲ.

■ ವೇಲು, ಅಭಯ ಆಟೋ ಚಾಲಕರ ಸಂಘದ ಅಧ್ಯಕ್ಷ

| ಏನಿರಲ್ಲ | ಏನಿರುತ್ತೆ |
|---|---|
| ■ ಹೊಟೇಲ್ | ■ ಆಸ್ಪತ್ರೆಗಳು, ಮೆಡಿಕಲ್ |
| ■ ಬಾರ್ ಮತ್ತು ರೆಸ್ಟೋರೆಂಟ್ | ■ ಆಂಬ್ಯುಲೆನ್ಸ್, ಬಸ್ |
| ■ ಪಬ್, ಮಾಲ್ | ■ ಓಲಾ, ಉಬರ್, ಆಟೋ, ಟ್ಯಾಕ್ಸಿ |
| ■ ಸಭೆ, ಸಮಾರಂಭ | ■ ಸರಕು ಸಾಗಣೆ ವಾಹನ |

ಹೊಸ ದಿಗಂತ

ಹೊಸ ದಿಗಂತ
12
24 Dec 2020

# ಯೋಜನೆಗಳ ಮೇಲೆ ನಿಗಾ ಇಡಲು ಆಡಳಿತಾಧಿಕಾರಿ ಸೂಚನೆ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಕಸ ಸಂಸ್ಕರಣಾ ಘಟಕಗಳ ನಿರ್ವಹಣೆ, ಹೊಸ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಟೆಂಡರ್, ಕಲಿಕಾ ಕೇಂದ್ರಗಳ ಸ್ಥಾಪನೆ, ಕಸದ ವಾಹನಗಳಿಗೆ ಜಿಪಿಎಸ್ ಅಳವಡಿಸುವುದು ಸೇರಿದಂತೆ ಎಲ್ಲಾ ಯೋಜನೆಗಳ ಜಾರಿಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಆಡಳಿತಾಧಿಕಾರಿ ಗೌರವ್ ಗುಪ್ತಾ ಸೂಚನೆ ನೀಡಿದರು.

ಪಾಲಿಕೆ ಕೇಂದ್ರ ಕಚೇರಿಯಲ್ಲಿ ಬೆಂಗಳೂರು ಮಿಷನ್-2022ಗೆ ಸಂಬಂಧಿಸಿದಂತೆ ಸ್ವಚ್ಛ ಬೆಂಗಳೂರು ಅಂಶದಡಿ ಕೈಗೊಂಡಿರುವ ಕಾರ್ಯಗಳ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ವೈಜ್ಞಾನಿಕ ತ್ಯಾಜ್ಯ ವಿಲೇವಾರಿಗೆ ಸಮುದಾಯದ ಸಹಯೋಗ ಪ್ರಾಮುಖ್ಯ ವಾಗಿದ್ದು, ನಮ್ಮ ಕಸ ನಮ್ಮ ಜವಾಬ್ದಾರಿ ಅಡಿ ಎಲ್ಲಾ ನಾಗರಿಕರು ಅವರ ಜವಾಬ್ದಾರಿ ಅರಿತು ಪಾಲಿಕೆ ಜೊತೆ ಕೈಜೋಡಿಸಬೇಕು. ಸಮುದಾಯದ ಹಂತದಲ್ಲಿ ಹಸಿ ಮತ್ತು ಒಣ ಕಸ ಬೇರ್ಪಡಿಸುವಿಕೆ ಬಗ್ಗೆ ಸಮರ್ಪಕ ಮಾಹಿತಿ ನೀಡಿ ಆ ಬಗ್ಗೆ ಎಲ್ಲರಿಗೂ ತರಬೇತಿ ನೀಡಬೇಕು. ಮನೆ/ಅಪಾರ್ಟ್‌ಮೆಂಟ್ ಗಳಲ್ಲಿಯೇ ಹಸಿ ತ್ಯಾಜ್ಯ ಸಂಸ್ಕರಣೆ ಮಾಡುವ



ವ್ಯವಸ್ಥೆ ಜಾರಿಯಾಗಬೇಕು ಎಂದರು.

**ಪ್ರತಿ ಬ್ಲಾಕ್‌ಗೆ ಶುಚಿ ಮಿತ್ರ ರಚನೆಗೆ ಚಿಂತನೆ:** ಪಾಲಿಕೆ ವ್ಯಾಪ್ತಿಯಲ್ಲಿ ಸುಮಾರು 4,200 ಬ್ಲಾಕ್ ಗಳಿದ್ದು, ಪ್ರತಿ ಬ್ಲಾಕ್ ಹಂತದಲ್ಲಿ ಶುಚಿ ಮಿತ್ರ ಗುರುತಿಸುವುದು, ಪ್ರತಿ ವಾರ್ಡ್ ಒಬ್ಬ ಸ್ವಯಂ ಸೇವಕರು, ಇವರುಗಳಿಗೆ ಸೂಕ್ತ ತರಬೇತಿ ನೀಡಲು ವಿಧಾನಸಭಾ ಕ್ಷೇತ್ರದಲ್ಲಿ ಒಬ್ಬ ಮಾಸ್ಟರ್ ಟ್ರೈನರ್ ಗುರುತಿಸಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು ಎಂದರು.

ಪಾಲಿಕೆ ವ್ಯಾಪ್ತಿಯ ಬೊಮ್ಮನಹಳ್ಳಿ ವಲಯದ ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಸ್ವಚ್ಛಾಗ್ರಹ ಸಂಸ್ಥೆಯವರು ಹಸಿ ಕಸದಿಂದ ಗೊಬ್ಬರ ತಯಾರಿಕೆ ಕುರಿತು ನಾಗರಿಕರಲ್ಲಿ ಅರಿವು ಮೂಡಿಸಲು ಕಲಿಕಾ ಕೇಂದ್ರವಿದ್ದು, ಎಲ್ಲಾ ವಲಯ ಅಧೀಕ್ಷಕ ಅಭಿಯಂತರರು ಈ ಕಲಿಕಾ ಕೇಂದ್ರಕ್ಕೆ ಭೇಟಿ ನೀಡಿ ಅಧ್ಯಯನ ನಡೆಸಿ ಸೂಕ್ತ ಕ್ರಮ ವಹಿಸಬೇಕು ಎಂದು ಸೂಚಿಸಿದರು.

## ಕಸ ಸಂಗ್ರಹಣಾ ವಾಹನಗಳಿಗೆ ಜಿಪಿಎಸ್

**ಪಾಲಿಕೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿಗೆ ಹಲವಾರು ಯೋಜನೆಗಳನ್ನು ರೂಪಿಸಿಕೊಳ್ಳಲಾಗಿದೆ. 7 ತ್ಯಾಜ್ಯ ಸಂಸ್ಕರಣಾ ಘಟಕಗಳ ಅಭಿವೃದ್ಧಿ, ಇದರ ಸಾಮರ್ಥ್ಯ ಹೆಚ್ಚಿಸುವಿಕೆ, ಕಸ ಸಂಗ್ರಹಣೆಯ ವಾಹನಗಳ ಮೇಲೆ ತಂತ್ರಜ್ಞಾನದ ಮೂಲಕ ನಿಗಾ ವಹಿಸಲು ವಾಹನಗಳಿಗೆ ಶೇ.90 ರಷ್ಟು ಆರ್ ಎಫ್‌ಐಡಿ ಕಾರ್ಡ್ ಹಾಗೂ ಶೇ.60 ರಷ್ಟು ಜಿಪಿಎಸ್ ಅಳವಡಿಸಲಾಗಿದೆ. ಇದನ್ನು ಶೇ.100ರಷ್ಟು ಪ್ರಗತಿ ಸಾಧಿಸುವಂತೆ ವಿಶೇಷ ಆಯುಕ್ತ ಡಿ. ರಂದೀಪ್ ತಿಳಿಸಿದರು.**

ಹೊಸ ದಿಗಂತ

ಹೊಸ ದಿಗಂತ

12
24 Dec 2020

# ಮೂವರಿಗೆ ಮಾತ್ರ ಸೋಂಕು

**ಬೆಂಗಳೂರು:** ಬ್ರಿಟನ್‌ನಿಂದ ಬೆಂಗಳೂರಿಗೆ ವಾಪಾಸಾಗಿದ್ದ 211 ಮಂದಿಯ ಪೈಕಿ 45 ವರ್ಷದ ಓರ್ವ ವ್ಯಕ್ತಿಗೆ ಸೋಂಕು ಧೃಡಪಟ್ಟಿದ್ದು, ಈ ಮೂಲಕ ಮೂವರಿಗೆ ಸೋಂಕು ತಗುಲಿದೆ ಎಂದು ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದರು.

ಬಿಬಿಎಂಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ರಿಟನ್‌ನಿಂದ ಬೆಂಗಳೂರಿಗೆ ಆಗಮಿಸಿದ 211 ಪ್ರಯಾಣಿಕ ವಿವರವನ್ನು ಸರ್ಕಾರ ನೀಡಿತ್ತು. ಈ ಪೈಕಿ 181 ಮಂದಿಗೆ ಆರ್‌ಟಿಪಿಸಿಆರ್ ಪರೀಕ್ಷೆ ನಡೆಸಲಾಗಿದೆ. 17 ಪ್ರಯಾಣಿಕರ ಮೊಬೈಲ್ ಸಂಖ್ಯೆ ಸಂಪರ್ಕಕ್ಕೆ ದೊರೆಯುತ್ತಿಲ್ಲ. ಇನ್ನುಳಿದವರಲ್ಲಿ ಕೆಲವರು ಹೊರ ರಾಜ್ಯ ಹಾಗೂ ಹೊರ ಜಿಲ್ಲೆಗಳಿಗೆ ಪ್ರಯಾಣ ಮಾಡಿದ್ದು, ಅವರ ವಿವರವನ್ನು ಸಂಬಂಧ ಪಟ್ಟವರಿಗೆ ನೀಡಲಾಗಿದೆ. ಈವರೆಗೆ 101 ಪ್ರಯಾಣಿಕ ಕೋವಿಡ್ ಪರೀಕ್ಷಾ ವರದಿ ಫಲಿತಾಂಶ ಲಭ್ಯವಾಗಿದ್ದು, ಪಶ್ಚಿಮ ವಲಯದ ವ್ಯಾಪ್ತಿಯ 45 ವರ್ಷ ಓರ್ವ ಪುರುಷನಿಗೆ ಸೋಂಕು ಇರುವುದು ಪತ್ತೆಯಾಗಿದೆ. ಅವರ ಸಂಪರ್ಕಿತರು ಮಾಹಿತಿ ಪಡೆಯಲಾಗುತ್ತಿದೆ. ಇನ್ನುಳಿದ 100 ಮಂದಿ ಫಲಿತಾಂಶ ನೆಗೆಟಿವ್ ಬಂದಿದ್ದು, 80 ಮಂದಿ ಫಲಿತಾಂಶ ಬರಬೇಕಿದೆ ಎಂದರು.

## ಕೋವಿಡ್ ಪರೀಕ್ಷೆಗೆ 5 ಮೊಬೈಲ್ ಯುನಿಟ್

ಪ್ರತಿ ವಲಯದಲ್ಲಿ ಕೋವಿಡ್ ಪರೀಕ್ಷೆಯ ಮಾದರಿ ಸಂಗ್ರಹಕ್ಕೆ ತಲಾ ಐದು ಮೊಬೈಲ್ ಯುನಿಟ್ ಒಳಗೊಂಡ ತಂಡ ನಿಯೋಜಿಸಲಾಗಿದೆ. ಕೋವಿಡ್ ಪರೀಕ್ಷೆಗೆ ಒಳಗಾದ 181 ಮಂದಿಗೂ ಏಳು ದಿನ ಕಡ್ಡಾಯ ಹೋಂ ಕ್ವಾರಂಟೈನ್‌ಗೆ ಸೂಚಿಸಲಾಗಿದೆ. ನಿಗಾ ವಹಿಸುವುದಕ್ಕೆ ಪ್ರತ್ಯೇಕ ತಂಡ ರಚನೆ ಮಾಡಿದ್ದು, ಪ್ರತಿ 2 ದಿನಕ್ಕೆ ಒಂದು ಬಾರಿ ಬ್ರಿಟನ್‌ನಿಂದ ಆಗಮಿಸಿದ ಪ್ರಯಾಣಿಕರ ಆರೋಗ್ಯ ಪರೀಕ್ಷೆಗೆ ಸೂಚಿಸಲಾಗಿದೆ.

# ಭೂಸಾರಿಗೆ ಸೆಸ್ ಕೈಬಿಡಲು ಆಗ್ರಹ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಪ್ರತ್ಯೇಕ ಕಸ ಮಂಡಳಿ ರಚನೆ, ತ್ಯಾಜ್ಯ ಸಂಗ್ರಹಕ್ಕೆ ಸೇವಾ ಶುಲ್ಕ ಹಾಗೂ ಭೂಸಾರಿಗೆ ಸೆಸ್ ಪ್ರಸ್ತಾವನೆ ಕೈಬಿಡಬೇಕು ಎಂದು ಆಗ್ರಹಿಸಿ ಭಾರತ ಕಮ್ಯೂನಿಸ್ಟ್ ಪಕ್ಷದ ಸದಸ್ಯರು ಬಿಬಿಎಂಪಿ ಕೇಂದ್ರ ಕಚೇರಿಯ ಆವರಣದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಸಿಪಿಐಎಂನ ಕಾರ್ಯದರ್ಶಿ ಎನ್. ಪ್ರತಾಪ್ ಸಿಂಹ ಅವರು, ಈಗಾಗಲೇ ಕೊರೊನಾದಿಂದ ಆರ್ಥಿಕ ಸಂಕಷ್ಟ ಉಂಟಾಗಿರುವುದರಿಂದ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭದಲ್ಲಿ ಕಸ ಸಂಗ್ರಹಕ್ಕೆ ಸೇವಾ ಶುಲ್ಕ, ಭೂಸಾರಿಗೆ ಸೆಸ್, ಕಟ್ಟಡಗಳ ನಿರ್ಮಾಣ ಮೂಲ ನಕ್ಷೆ ಮಂಜೂರಾತಿ ಸೇರಿದಂತೆ ವಿವಿಧ ಪ್ರಸ್ತಾವನೆಗಳ ಮೂಲಕ ಸಾರ್ವಜನಿಕರಿಗೆ ಆರ್ಥಿಕ ಹೊರೆ ಹೊರಿಸಿದಂತಾಗುತ್ತದೆ. ಹೀಗಾಗಿ ಪ್ರಸ್ತಾವನೆಗಳನ್ನು ಕೂಡಲೇ ಕೈಬಿಡಬೇಕು ಎಂದು ಆಗ್ರಹಿಸಿದರು.

ಹೊಸ ದಿಗಂತ

# 550 ಸೋಂಕು ದೃಢ

**ಬೆಂಗಳೂರು:** ನಗರದಲ್ಲಿ ಬುಧವಾರ 550 ಜನರಿಗೆ ಕೊರೋನಾ ಸೋಂಕು ದೃಢಪಟ್ಟಿದೆ.



694 ಸೋಂಕಿತರು ಆಸ್ಪತ್ರೆಯಿಂದ ಮನೆಗೆ ತೆರಳಿದ್ದು, ಇಬ್ಬರು ಮೃತರಾಗಿದ್ದಾರೆ.

ನಗರದಲ್ಲಿ ಒಟ್ಟು 3,84,366 ಸೋಂಕಿತರು ದೃಢಪಟ್ಟಿದ್ದು, ಒಟ್ಟು 4,282 ಜನರು ಸೋಂಕಿಗೆ ಬಲಿಯಾಗಿದ್ದಾರೆ. ಇಲ್ಲಿಯವರೆಗೆ 3,71,081 ಜನರು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಕೋವಿಡ್-19ಕ್ಕೆ ಮೀಸಲಾದ ಆಸ್ಪತ್ರೆಗಳು, ಆರೋಗ್ಯ ಕೇಂದ್ರಗಳು ಹಾಗೂ ಆರೈಕೆ ಕೇಂದ್ರಗಳು ಒಳಗೊಂಡಂತೆ 9,002 ಜನ ಸಕ್ರಿಯ ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ.

ಮಂಗಳವಾರದ ಬಿಬಿಎಂಪಿ ವರದಿಯಲ್ಲಿ 12,10,922 ಜನರನ್ನು ಪ್ರಾಥಮಿಕ ಸಂಪರ್ಕಿರನ್ನು ಗುರುತಿಸಲಾಗಿದ್ದು, ದ್ವಿತೀಯ ಸಂಪರ್ಕಿರನ್ನು 14,05,009 ಜನರನ್ನು ಗುರುತಿಸಲಾಗಿದೆ. ಇದರಲ್ಲಿ ಪಾಸಿಟಿವ್ ಪ್ರಮಾಣ ಶೇ. 7.10 ರಷ್ಟಿದೆ. ಕೊರೋನಾಕ್ಕೆ ಮೃತರಾಗುತ್ತಿರುವ ಪ್ರಮಾಣ ಶೇ. 1.11 ರಷ್ಟಿದ್ದು, ಗುಣಮುಖ ಹೊಂದುತ್ತಿರುವವರ ಪ್ರಮಾಣ ಶೇ.96.50ಕ್ಕೆ ಏರಿದೆ.

## ಆಯುಕ್ತರಿಗೆ ಸೋಂಕು

ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ಅವರಿಗೆ ಕೊರೋನಾ ಸೋಂಕು ದೃಢಪಟ್ಟಿದೆ. ನಗರದ ಮಲ್ಲಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸೋಂಕಿನ ಲಕ್ಷಣಗಳಾದ ತೀವ್ರ ಜ್ವರ, ಕೆಮ್ಮು, ಶೀತ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಮಂಗಳವಾರ ಬೆಳಗ್ಗೆ ರ್ಯಾಪಿಡ್ ಆ್ಯಂಟಿಜೆನ್ ಪರೀಕ್ಷೆ ಮಾಡಿಸಿದಾಗ ಸೋಂಕು ದೃಢಪಟ್ಟಿದೆ. ನಂತರ ಆರ್‌ಟಿಪಿಸಿಆರ್ ಪರೀಕ್ಷೆಯಲ್ಲಿಯೂ ಸೋಂಕು ದೃಢಪಟ್ಟಿದ್ದರಿಂದ ವೈದ್ಯರ ಸಲಹೆ ಮೇರೆಗೆ ಚಿಕಿತ್ಸೆ ಪಡೆಯಲು ಆಸ್ಪತ್ರೆಗೆ ದಾಖಲಾಗಿದ್ದಾರೆ. ಆಯುಕ್ತರ ಜೊತೆ ಸಭೆ, ಸಮಾರಂಭದಲ್ಲಿ ಪಾಲ್ಗೊಂಡ 15ಕ್ಕೂ ಹೆಚ್ಚು ಅಧಿಕಾರಿ, ಸಿಬ್ಬಂದಿ ಮನೆಯಲ್ಲಿ ಕ್ವಾರಂಟೈನ್ ಒಳಪಡಿಸಲಾಗಿದೆ.

ಜನದನಿಯ ಸಾರಥಿ
ವಾರ್ತಾ ಭಾರತಿ

ಜನದನಿಯ ಸಾರಥಿ
ವಾರ್ತಾ ಭಾರತಿ

# ಮಾರುಕಟ್ಟೆ ಮಾರ್ಗಸೂಚಿ: ಕೊರೋನ ಮುಂಜಾಗ್ರತಾ ಕ್ರಮಕ್ಕೆ ಸೂಚನೆ



ಬೆಂಗಳೂರು, ಡಿ.23: ಕೋವಿಡ್ ಎರಡನೇ ಅಲೆ ವ್ಯಾಪಕವಾಗಿ ಹರಡುತ್ತಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಎಲ್ಲ ವಾಣಿಜ್ಯ ಮಳಿಗೆಗಳು ಆರು ಅಡಿ ಅಂತರಗಳಲ್ಲಿ ಕಡ್ಡಾಯವಾಗಿ ಚೌಕಾಕಾರ ಅಥವಾ ವೃತ್ತಾಕಾರದ ಗುರುತುಗಳನ್ನು ಹಾಕುವುದು, ಮಾಸ್ಕ್ ಪಾಲಿಸುವುದು, ಗ್ರಾಹಕರು ಸುರಕ್ಷಿತ ಅಂತರ ಕಾಯ್ದುಕೊಳ್ಳುವಂತೆ ಕಾಪಾಡಿಕೊಳ್ಳಬೇಕೆಂದು ಆರೋಗ್ಯ ಇಲಾಖೆ ಸೂಚಿಸಿದೆ.

ಈ ಸಂಬಂಧ ಸುತ್ತೋಲೆ ಹೊರಡಿಸಿರುವ ಇಲಾಖೆಯು, ಮಾರುಕಟ್ಟೆಗಳಲ್ಲಿ ಸೋಂಕು ಹರಡುವಿಕೆ ತಡೆಗೆ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ತಿಳಿಸಿದೆ. ಹಿರಿಯ ನಾಗರಿಕರು, ಗರ್ಭಿಣಿ ಮಹಿಳೆಯರು ಮತ್ತು ಮಕ್ಕಳು ಅಗತ್ಯವಿರುವ ಸಂದರ್ಭಗಳಲ್ಲಿ ಹೊರತುಪಡಿಸಿ ಬೇರೆ ಸಂದರ್ಭಗಳಲ್ಲಿ ಮಾರುಕಟ್ಟೆಗಳಿಗೆ ಭೇಟಿ ನೀಡುವುದರ ಬಗ್ಗೆ ಮಾರ್ಗದರ್ಶನ ನೀಡಲಾಗಿದೆ. ಆರು ಅಡಿಗಳ ಭೌತಿಕ ಅಂತರ ಕಾಯ್ದುಕೊಳ್ಳುವುದು, ಮಾಸ್ಕ್ ಕಡ್ಡಾಯ ಮಾಡಲಾಗಿದೆ. ಕೈಯನ್ನು ಸ್ವಚ್ಛಗೊಳಿಸುವುದು ಉತ್ತೇಜಿಸಬೇಕಿದೆ ಎಂದು ತಿಳಿಸಲಾಗಿದೆ.

ದೈನಂದಿನ ಚಟುವಟಿಕೆ ಪ್ರಾರಂಭಿಸುವ ಮುನ್ನ ಶೇ.1ರಷ್ಟು ಪ್ರಮಾಣದಲ್ಲಿ ಸೋಡಿಯಂ ನೈಟ್ರೇಟ್ ದ್ರಾವಣದಿಂದ ಅಥವಾ ಗ್ರಹ ಬಳಕೆಯ ಮಾರ್ಜಕದಿಂದ ಮಳಿಗೆಗಳನ್ನು ಸ್ವಚ್ಛಪಡಿಸಲು ಮಾಲಕರು ಕ್ರಮವಹಿಸಬೇಕು. ಪ್ರವೇಶ ದ್ವಾರದಲ್ಲಿಯೇ ಸೋಂಕು ನಿವಾರಕ ದ್ರಾವಣ (ಸ್ಯಾನಿಟೈಸರ್) ಇಡಬೇಕು. ನಿಯಮಿತ ನಿಗಾವಣೆಯನ್ನು ಮಾಡಲು ಮಾರುಕಟ್ಟೆ ಮಾಲಕರ ಸಂಘಟನೆಗಳು ಉಪ ಸಮಿತಿಗಳನ್ನು ರಚಿಸಬೇಕು. ಮಾರುಕಟ್ಟೆಗಳ ಆಗಮನ ದ್ವಾರ ಮತ್ತು ಇನ್ನಿತರ ಪ್ರವೇಶ ದ್ವಾರದಲ್ಲಿ ಸಾಮೂಹಿಕ ಥರ್ಮಲ್ ಸ್ಕ್ಯಾನಿಂಗ್ ವ್ಯವಸ್ಥೆಯಾಗಬೇಕು ಎಂದು ತಿಳಿಸಲಾಗಿದೆ.

ಸಾರ್ವಜನಿಕವಾಗಿ ಜನದಟ್ಟಣೆ ಆಗದಂತೆ ನೋಡಿಕೊಳ್ಳಲು ಮಾರ್ಷಲ್‌ಗಳು, ಗೃಹರಕ್ಷಕ ದಳಗಳು ಮತ್ತು ಸ್ವಯಂ ಸೇವಕರ ಸೇವೆ ಬಳಸಿಕೊಳ್ಳಬೇಕು. ದೈನಂದಿನ ಬಳಕೆಯ ವಸ್ತುಗಳ ಖರೀದಿಗೆ ಆನ್‌ಲೈನ್ ವ್ಯವಸ್ಥೆಯನ್ನು ಉತ್ತೇಜಿಸಬೇಕು. ಸರಕಾರದ ಮಾರ್ಗಸೂಚಿಗಳನ್ನು ಮಾಲಕರು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

## ನಿಯಮ ಪಾಲಿಸದಿದ್ದಲ್ಲಿ ದಂಡ

ಮುಖಗವಸನ್ನು ಖರೀದಿಸಲು ಸಾಧ್ಯವಾಗದವರಿಗೆ ಉಚಿತವಾಗಿ ಮುಖಗವಸುಗಳನ್ನು ನೀಡುವುದು ಮತ್ತು ಅದನ್ನು ಬಳಸಲು ಮಾಲಕರು ಉತ್ತೇಜಿಸಬೇಕು. ಸುರಕ್ಷಿತ ಅಂತರ ಮಾನದಂಡಗಳನ್ನು ಪಾಲನೆ ಮಾಡದಿರುವವರಿಗೆ ಹಾಗೂ ಮಾಸ್ಕ್ ಹಾಕದವರಿಗೆ ದಂಡ ವಿಧಿಸಲಾಗುವುದು. ದಿನಬಿಟ್ಟು ದಿನ ಮಾರುಕಟ್ಟೆ, ಮಳಿಗೆ ತೆರೆಯಲಿರುವ ಕ್ರಮಗಳನ್ನು ಆಲೋಚಿಸಬೇಕು ಎಂದು ಸುತ್ತೋಲೆಯಲ್ಲಿ ಸೇರಿದ್ದು, ನಿಯಮಗಳು ಪಾಲನೆಯಾಗದಿದ್ದಲ್ಲಿ ಮಾಲಕರಿಗೆ ದಂಡ ವಿಧಿಸಲಾಗುವುದು. ಹೆಚ್ಚಿನ ಪ್ರಕರಣಗಳು ವರದಿಯಾದಲ್ಲಿ ಮಾರುಕಟ್ಟೆ ಮುಚ್ಚಲಾಗುವುದು ಎಂದು ಎಚ್ಚರಿಸಲಾಗಿದೆ.

Bengaluru Edition
Dec 24, 2020 Page No.8

ಸಂಜೆವಾಣಿ
1982

# ಕಸ ನಿರ್ವಹಣೆ ಶುಲ್ಕ ನಿಗಧಿ ವಿರೋಧಿಸಿ ಪ್ರತಿಭಟನೆ

ಬೆಂಗಳೂರು, ಡಿ.23–ಮನೆಗಳ ಕಸ ಸಂಗ್ರಹಕ್ಕೆ ಬಿಬಿಎಂಪಿ ಮಾಸಿಕ ಶುಲ್ಕ ವಿಧಿಸಲು ಮುಂದಾಗಿರುವುದನ್ನು ವಿರೋಧಿಸಿ ಸಿಪಿಐ(ಎಂ) ಪಕ್ಷದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದಲ್ಲಿಂದು ಬಿಬಿಎಂಪಿ ಕೇಂದ್ರ ಕಚೇರಿ ಮುಂಭಾಗ ಜಮಾಯಿಸಿದ ಪಕ್ಷದ ಕಾರ್ಯಕರ್ತರು, ಕಸ ಸಂಗ್ರಹಕ್ಕೆ ಬಿಬಿಎಂಪಿ ಶುಲ್ಕವನ್ನು ಹೆಚ್ಚಿಸಿದೆ. ಇದೊಂದು ಅವೈಜ್ಞಾನಿಕ ಕ್ರಮ. ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ. ಹೀಗಾಗಿ, ಇಂತಹ ಕ್ರಮಗಳಿಗೆ ಮುಂದಾಗಿದೆ ಎಂದು ಆರೋಪಿಸಿದರು.

ಕಸ ಸಂಗ್ರಹಕ್ಕೆ ಶುಲ್ಕ ಹೆಚ್ಚಿಸಿದರೆ ಜನರಿಗೆ ತೊಂದರೆ ಆಗಲಿದೆ. ಪ್ರತಿ ಮನೆಗೆ 200ರೂ. ಶುಲ್ಕ ಸರಿಯಲ್ಲ. ಕಸ ಸಂಗ್ರಹಕ್ಕೆ ಇಷ್ಟು ದೊಡ್ಡ ಪ್ರಮಾಣದ ಶುಲ್ಕ ಬೆಂಗಳೂರಿನಲ್ಲಿ ಮಾತ್ರ ವಿದೆ. ದೇಶದ ಇತರೆ ಯಾವುದೇ ನಗರಗಳಲ್ಲಿ ಈ ರೀತಿ ಶುಲ್ಕ ಇಲ್ಲ ಎಂದು ಪ್ರತಿಭಟನಾಕಾರರು ಹೇಳಿದರು.

ಪ್ರತಿಭಟನೆಯಲ್ಲಿ ಚಿಂತಕಿ ಕೆ.ಎಸ್.ವಿಮಲಾ, ಸಿಪಿಐ(ಎಂ) ಬೆಂಗಳೂರು ಉತ್ತರ ಜಿಲ್ಲಾ ಸಮಿತಿ ಕಾರ್ಯದರ್ಶಿ ಎನ್.ಪ್ರತಾಪ್ ಸಿಂಹ, ದಕ್ಷಿಣ ಜಿಲ್ಲಾ ಸಮಿತಿ ಕಾರ್ಯದರ್ಶಿ ಕೆ.ಎನ್. ಉಮೇಶ್ ಸೇರಿದಂತೆ ಪ್ರಮುಖರಿದ್ದರು.

ಸಂಜೆವಾಣಿ
1982

# ರಾಜ್ಯದಲ್ಲಿ ರಾತ್ರಿ ಕರ್ಫ್ಯೂ ಮತ್ತೆ ಜಾರಿ

## ಬ್ರಿಟನ್ ಸೋಂಕು ತಡೆಗೆ ಕ್ರಮ, ಇಂದಿನಿಂದ ಜ. 2 ರವರೆಗೆ ಜಾರಿ

ಬೆಂಗಳೂರು,ಡಿ.23–ಬ್ರಿಟನ್‌ನಲ್ಲಿ ಪತ್ತೆಯಾಗಿರುವ ರೂಪಾಂತರ ವೈರಸ್‌ನ್ನು ತಡೆಗಟ್ಟಲು ರಾಜ್ಯದಲ್ಲಿ ಇಂದಿನಿಂದ ಜ. 2ವರೆಗೆ ರಾತ್ರಿ ಕರ್ಫ್ಯೂ ಜಾರಿಗೊಳಿಸುವ ಮಹತ್ವದ ತೀರ್ಮಾನವನ್ನು ರಾಜ್ಯ ಸರ್ಕಾರ ಕೈಗೊಂಡಿದೆ.

ರೂಪಾಂತರ ಕೊರೊನಾ ವೈರಸ್‌ನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕಟ್ಟುನಿಟ್ಟಿನ ಕ್ರಮಗಳ ಬಗ್ಗೆ ಮುಖ್ಯಮಂತ್ರಿ ಯಡಿಯೂರಪ್ಪನವರ ಅಧ್ಯಕ್ಷತೆಯಲ್ಲಿ ಮುಖ್ಯಮಂತ್ರಿಗಳ ಗೃಹ ಕಛೇರಿ ಕೃಷ್ಣಾದಲ್ಲಿ ನಡೆದ ಆರೋಗ್ಯ ಸಚಿವರು, ಕೋವಿಡ್ ತಾಂತ್ರಿಕ ಸಲಹಾ ಸಮಿತಿ ತಜ್ಞರ ಸಭೆಯಲ್ಲಿ ರಾತ್ರಿ ಕರ್ಫ್ಯೂ ಜಾರಿಗೊಳಿಸುವ ತೀರ್ಮಾನ ಕೈಗೊಳ್ಳಲಾಗಿದೆ.

ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಯಡಿಯೂರಪ್ಪ ಅವರು, ರೂಪಾಂತರ ವೈರಸ್ ಹರಡುವುದನ್ನು ತಡೆಯಲು ಇಂದಿನಿಂದ ರಾತ್ರಿ ಕರ್ಫ್ಯೂ ಜಾರಿ ಮಾಡುವ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಇಂದಿನಿಂದ ಜನವರಿ 2 ರವರೆಗೂ ರಾತ್ರಿ 10 ರಿಂದ ಬೆಳಗ್ಗೆ 6 ಗಂಟೆಯವರೆಗೂ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ ಎಂದು ಅವರು ಹೇಳಿದರು.

ರಾತ್ರಿ ಕರ್ಫ್ಯೂ ಜಾರಿಯಲ್ಲಿರುವ 9 ದಿನಗಳ ಕಾಲ ರಾತ್ರಿ 10ರ ನಂತರ ಎಲ್ಲ ರೀತಿಯ ವಾಣಿಜ್ಯ ಚಟುವಟಿಕೆಗಳು, ಜನರ ಓಡಾಟ, ವಾಹನಗಳ ಸಂಚಾರ ಬಂದ್ ಆಗಿರಲಿದೆ. ಈ ಹಿಂದೆ ಜಾರಿಯಲ್ಲಿದ್ದ ರಾತ್ರಿ ಕರ್ಫ್ಯೂ ಮಾದರಿಯಲ್ಲೇ ಈ ಕರ್ಫ್ಯೂ ಜಾರಿಯಲ್ಲಿರುತ್ತದೆ ಎಂದರು.

ಕೇಂದ್ರ ಸರ್ಕಾರದ ಸಲಹೆ ಮತ್ತು ತಜ್ಞರ ಆಶಯದಂತೆ ರೂಪಾಂತರ ವೈರಸ್‌ನ್ನು ತಡೆಯಲು ರಾತ್ರಿ ಕರ್ಫ್ಯೂ ಜಾರಿ ಮಾಡುವ ತೀರ್ಮಾನವನ್ನು ಕೈಗೊಳ್ಳಲಾಗಿದೆ ಎಂದು ಅವರು



ಸ್ಪಷ್ಟಪಡಿಸಿದರು. ಈ ರಾತ್ರಿ ಕರ್ಫ್ಯೂವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುವುದು. 9 ದಿನಗಳ ಕಾಲ ರಾತ್ರಿ 10ರ ನಂತರ ಯಾವುದೇ ಚಟುವಟಿಕೆಗಳು, ಕಾರ್ಯಕ್ರಮಗಳು, ಸಮಾರಂಭ, ಸಭೆಗಳನ್ನು ನಡೆಸುವಂತಿಲ್ಲ ಎಂದು ಹೇಳಿದರು.

ಆಸ್ಪತ್ರೆ, ಔಷಧಿ ಅಂಗಡಿ ಮತ್ತಿತರ ಅವಶ್ಯ ಸೇವೆಗಳಿಗೆ ರಾತ್ರಿ ಕರ್ಫ್ಯೂಯಿಂದ ವಿನಾಯ್ತಿ ಇರುತ್ತದೆ ಎಂದು ಅವರು ಹೇಳಿದರು.

ಬೆಳಗ್ಗೆಯಿಂದ ರಾತ್ರಿವರೆಗೂ ಕೋವಿಡ್ ಮಾರ್ಗಸೂಚಿಗಳನ್ನು ಪಾಲಿಸಿ ಕಾರ್ಯಕ್ರಮಗಳನ್ನು ನಡೆಸಲು ಅಡ್ಡಿ ಇಲ್ಲ. ಆದರೆ ರಾತ್ರಿ ಮಾತ್ರ ಎಲ್ಲ ಚಟುವಟಿಕೆಗಳು ಬಂದ್ ಆಗುತ್ತವೆ ಎಂದರು.

### ಕಟ್ಟುನಿಟ್ಟಿನ ನಿಗಾ

ಬ್ರಿಟನ್‌ನಿಂದ ರಾಜ್ಯಕ್ಕೆ ಆಗಮಿಸುವವರ ವಿವರಗಳನ್ನು ಕಲೆ ಹಾಕಲಾಗುತ್ತಿದೆ. ಪ್ರತಿಯೊಬ್ಬರಿಗೂ ಕೊರೊನಾ ಪರೀಕ್ಷೆ ನಡೆಸಲಾಗುವುದು. ಹಾಗೆಯೇ ವಿಮಾನ ನಿಲ್ದಾಣದಲ್ಲಿ ರಾಜ್ಯಕ್ಕೆ ಆಗಮಿಸುವ ಪ್ರಯಾಣಿಕರಿಗೆ ಆರ್‌ಟಿಪಿಸಿಆರ್ ಪರೀಕ್ಷೆಯನ್ನು ನಡೆಸಲಾಗುತ್ತಿದೆ. ರೂಪಾಂತರ ವೈರಸ್‌ನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದರು.

ಶಾಲೆ ಪುನರಾರಂಭ ಮತ್ತೆ ಸಭೆ

ರಾಜ್ಯದಲ್ಲಿ 10 ಮತ್ತು ದ್ವಿತೀಯ ಪಿಯುಸಿ ತರಗತಿಗಳು ಮತ್ತು ವಿದ್ಯಾಗಮವನ್ನು ಜನವರಿ 1 ರಿಂದ ಆರಂಭಿಸುವ ತೀರ್ಮಾನವನ್ನು ಈಗಾಗಲೇ ಕೈಗೊಳ್ಳಲಾಗಿತ್ತು. ಆದರೆ ರೂಪಾಂತರ ವೈರಸ್‌ನ ಹಿನ್ನೆಲೆಯಲ್ಲಿ ಈ ತೀರ್ಮಾನವನ್ನು ಮರುಪರಿಶೀಲಿಸಲು ನಿರ್ಧರಿಸಿದ್ದೇವೆ. ಈ ತಿಂಗಳ 29 ರಂದು ಸಭೆ ನಡೆಸಿ ಪರಿಸ್ಥಿತಿಯನ್ನು ಪರಾಮರ್ಶಿಸಿ ಶಾಲಾ–ಕಾಲೇಜು ಆರಂಭದ ಬಗ್ಗೆ ತೀರ್ಮಾನ ಕೈಗೊಳ್ಳುತ್ತೇವೆ ಎಂದರು.

ಸದ್ಯಕ್ಕೆ ಜನವರಿ 1 ರಿಂದ ಶಾಲೆಗಳನ್ನು ಆರಂಭಿಸುವ ತೀರ್ಮಾನ ಮಾಡಿದ್ದೇವೆ. ಅಷ್ಟರೊಳಗೆ ಬ್ರಿಟನ್‌ನಿಂದ ಬಂದಿರುವ ಪ್ರಯಾಣಿಕರ ಕೊರೊನಾ ಪರೀಕ್ಷಾ ವರದಿಗಳು ಬರಲಿದೆ. ಎಲ್ಲವನ್ನು ಗಮನದಲ್ಲಿಟ್ಟುಕೊಂಡು ಶಾಲೆಗಳನ್ನು ಆರಂಭಿಸುವ ಬಗ್ಗೆ ಈ ತಿಂಗಳ 29 ರಂದು ತೀರ್ಮಾನ ಮಾಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ. ಸುಧಾಕರ್ ಇದ್ದರು.

# ಕೋಟಿ ವಂಚಕ ಸ್ವಾಮಿ ಭವಿಷ್ಯ ಕೇಳಿ ದಂಗಾದ ಸಿಸಿಬಿ ಪೊಲೀಸರು

ಬೆಂಗಳೂರು,ಡಿ.23–ಬಿಜೆಪಿ ಮುಖಂಡರ ಹೆಸರಲ್ಲಿ ಕೋಟ್ಯಾಂತರ ರೂಗಳ ವಂಚನೆ ನಡೆಸಿರುವ ಬಂಧಿತ ಆರೋಪಿ ಯುವರಾಜ್ ಅಲಿಯಾಸ್ ಸೇವಾಲಾಲ್ ಸ್ವಾಮಿ ವಿಚಾರಣೆ ವೇಳೆ ನೀಡಿರುವ ವಿವರ ಕೇಳಿ ಸಿಸಿಬಿ ಅಧಿಕಾರಿಗಳು ದಂಗಾಗಿದ್ದಾರೆ.

ವಿಚಾರಣೆ ನಡೆಸುತ್ತಿದ್ದ ಸಿಸಿಬಿ ಅಧಿಕಾರಿಗಳಿಗೆ ಭವಿಷ್ಯ ಹೇಳಲು ಮುಂದಾಗುವ ಆರೋಪಿ ಸ್ವಾಮಿ ಕೋಟ್ಯಾಂತರ ಆಸ್ತಿಯನ್ನು ಹೇಗೆ ಸಂಪಾದಿಸಿದೆ ಎಂಬ ಪ್ರಶ್ನೆಗೆ ಲಕ್ಷ್ಮಿ ಮನೆಗೇ ಹುಡುಕಿಕೊಂಡು ಬರುವಾಗ ಬೇಡ ಎನ್ನಲು ಆಗುತ್ತದೆಯೇ ನಾನು ಯಾರ ಬಳಿಯೂ ಹಣ ಕೊಡಿ ಎಂದು



ಕೇಳಿಲ್ಲ. ಅವರಾಗಿಯೇ ಮನೆಗೆ ಬಂದು ಕಾಲಿಗೆ ಬಿದ್ದು ಹಣ ಕೊಡುತ್ತಿದ್ದರು.

ನೀವೇ ಹೇಳಿ ನಿಮ್ಮ ಮನೆಗೇ ಲಕ್ಷ್ಮಿ ಹುಡುಕಿಕೊಂಡು ಬಂದರೆ ಬೇಡ ಎನ್ನುವಿರಾ ಎಂದು ಅಧಿಕಾರಿಗಳನ್ನು ಪ್ರಶ್ನೆ ಮಾಡಿದ್ದಾನೆ.

**ಅಧಿಕಾರಿಗಳಿಗೇ ಭವಿಷ್ಯ:** ಸ್ವಾಮಿ ತನಿಖೆ ನಡೆಸುತ್ತಿರುವ ತನಿಖಾಧಿಕಾರಿಗಳಿಗೆ ನಿಮ್ಮ ಮುಖ ನೋಡುವೆ ನೀವು ಏನು ಅನ್ನೋದನ್ನು ಹೇಳುವೆ ಒಂದೆರಡು ನಿಮಿಷ ಸುಮ್ಮನಿರಿ ಎಂದು ಮರಳು ಮಾಡಲು ಮುಂದಾಗಿದ್ದ.

ನಂತರ ನೀವೆಲ್ಲಾ ದೈವ ಭಕ್ತರು, ನಿಮಗೆ ಯಾರ ಭಯವೂ ಇಲ್ಲ ಎನ್ನುವ ಭವಿಷ್ಯ ನುಡಿದು ಪ್ರಶ್ನೆಗಳಿಂದ ನುಣುಚಿಕೊಳ್ಳುವ ಯತ್ನ ನಡೆಸಿದ್ದಾನೆ.

ಇದಕ್ಕೆಲ್ಲಾ ಸೊಪ್ಪು ಹಾಕದ ಅಧಿಕಾರಿಗಳು ಸ್ವಾಮಿಗೆ ಕ್ಲಾಸ್ ತೆಗೆದುಕೊಂಡು, ನಾವು ಕೇಳಿದ್ದಕ್ಕಷ್ಟೇ ಉತ್ತರ ಕೊಡು ಎಂದಿದ್ದಾರೆ. ಡಿ.28ರವರೆಗೂ ಯುವರಾಜ ಸಿಸಿಬಿ ವಶದಲ್ಲಿರಲಿದ್ದು ತನಿಖೆ ತೀವ್ರ ಗೊಳಿಸಲಿದ್ದಾರೆ.

(ಏಳನೇ ಪುಟ ನೋಡಿ)

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

# ರಾಜ್ಯಾದ್ಯಂತ ಇಂದಿನಿಂದ
# ರಾತ್ರಿ ಕರ್ಫ್ಯೂ

## ರಾತ್ರಿ 10 ಗಂಟೆಯಿಂದ ಬೆಳಗ್ಗೆ 6 ಗಂಟೆ ವರೆಗೆ

## ಮಾರ್ಗ ಸೂಚಿ ಸಂಜೆ ಬಿಡುಗಡೆ

ಬೆಂಗಳೂರು,ಡಿ.23- ಹೊಸ ಮಾದರಿಯ ರೂಪಾಂತರಗೊಂಡ ಕೊರೊನಾ ವೈರಸ್ ಯಾವುದೇ ಸಂದರ್ಭದಲ್ಲಿ ಅಪ್ಪಳಿಸ ಬಹುದೆಂಬ ಭೀತಿಯ ಕಾರಣಕ್ಕಾಗಿ ರಾಜ್ಯ ಸರ್ಕಾರ ಇಂದು ರಾತ್ರಿಯಿಂದಲೇ ಜಾರಿಯಾಗುವಂತೆ ರಾಜ್ಯಾದ್ಯಂತ 9 ದಿನಗಳ ಕಾಲ ರಾತ್ರಿ ಕರ್ಫ್ಯೂ(ನೈಟ್‌ಕರ್ಫ್ಯೂ) ವಿಧಿಸುವ ತೀರ್ಮಾನವನ್ನು ಕೈಗೊಂಡಿದೆ. ...ಪುಟ 2



ಶ್ರೀಗಳ ಆಶೀರ್ವಾದ..ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಅವರು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

## ಜನವರಿ 1 ರಿಂದ 10-12ನೇ ತರಗತಿ ಆರಂಭ ನಿಶ್ಚಿತ



ಬೆಂಗಳೂರು,ಡಿ.23- ಈಗಾಗಲೇ ನಿರ್ಧಾರವಾಗಿರುವಂತೆ ಜ.1ರಿಂದಲೇ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ತರಗತಿಗಳು ರಾಜ್ಯಾದ್ಯಂತ ಆರಂಭವಾಗಲಿವೆ ಎಂದು ಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್ ಮತ್ತೊಮ್ಮೆ ಪುನರುಚ್ಚರಿಸಿದ್ದಾರೆ. ...ಪುಟ 2



# ರಾತ್ರಿ ಕರ್ಫ್ಯೂ

ಇಂದು ರಾತ್ರಿ 10ರಿಂದ ಮುಂಜಾನೆ 6 ಗಂಟೆಯವರೆಗೂ ಜ.2ರವರೆಗೆ ಕರ್ಫ್ಯೂ ವಿಧಿಸಿರುವುದರಿಂದ ಅಗತ್ಯ ತುರ್ತು ಸೇವೆಗಳನ್ನು ಹೊರತುಪಡಿಸಿ ಎಲ್ಲ ಚಟುವಟಿಕೆಗಳಿಗೆ ಸಂಪೂರ್ಣ ಕಡಿವಾಣ ಬೀಳಲಿದೆ.

ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಅಧ್ಯಕ್ಷತೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಡಾ.ಕೆ.ಸುಧಾಕರ್, ತಾಂತ್ರಿಕ ಸಲಹಾ ಸಮಿತಿಯ ಸದಸ್ಯರೊಂದಿಗೆ ಸಭೆ ನಡೆಸಲಾಯಿತು.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಬಿಎಸ್‌ವೈ, ಇಂದು ರಾತ್ರಿಯಿಂದಲೇ ಜಾರಿಯಾಗುವಂತೆ ಪ್ರತಿದಿನ ರಾತ್ರಿ 10ರಿಂದ ಮುಂಜಾನೆ 6ರವರೆಗೆ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಕರ್ಫ್ಯೂ ವಿಧಿಸಲಾಗುವುದು. ಸಾರ್ವಜನಿಕರು ಸಹಕರಿಸಬೇಕೆಂದು ಮನವಿ ಮಾಡಿದರು.

ತಾಂತ್ರಿಕ ಸಲಹಾ ಸಮಿತಿ ಸದಸ್ಯರು ನೀಡಿರುವ ಸಲಹೆಯಂತೆ ರೂಪಾಂತರ ಕೋವಿಡ್ ಸೋಂಕು ಹಬ್ಬಬಹುದೆಂಬ ಹಿನ್ನೆಲೆಯಲ್ಲಿ ಸರ್ಕಾರ ಈ ಕ್ರಮ ಕೈಗೊಂಡಿದೆ. ರಾತ್ರಿ 10ರಿಂದ ಮುಂಜಾನೆ 6ರವರೆಗೆ ಕರ್ಫ್ಯೂ ಜಾರಿಯಲ್ಲಿರುತ್ತದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಈ ಕ್ರಮ ತೆಗೆದುಕೊಂಡಿದ್ದೇವೆ. ಇದಕ್ಕೆ ಎಂದಿನಂತೆ ಸಾರ್ವಜನಿಕರು ಸಹಕರಿಸಬೇಕೆಂದು ಮನವಿ ಮಾಡಿದರು.

ಸದ್ಯಕ್ಕೆ ಇದು 9 ದಿನಗಳ ಕಾಲ ಮಾತ್ರ ರಾತ್ರಿ ಕರ್ಫ್ಯೂ ವಿಧಿಸಲು ತೀರ್ಮಾನಿಸಿದ್ದೇವೆ. ಹೊಸ ಅಲೆಯ ಸೋಂಕು ಹಬ್ಬದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿದೇಶದಿಂದ ಆಗಮಿಸುವವರು ವಿಮಾನ ನಿಲ್ದಾಣದಲ್ಲಿ ಕಡ್ಡಾಯವಾಗಿ ತಪಾಸಣೆಗೊಳಗಾಗಬೇಕು. ಅವರಿಗೆ ಆರ್‌ಟಿಪಿಸಿಎಲ್ ಪರೀಕ್ಷೆ ಕಡ್ಡಾಯ ಮಾಡಲಾಗಿದೆ.

ವಿಮಾನ ನಿಲ್ದಾಣದಲ್ಲಿ ವಿದೇಶಿ ಪ್ರಯಾಣಿಕರ ಮೇಲೆ ನಿಗಾ ಇರಿಸಲು ತಂಡವೊಂದನ್ನು ನಿಯೋಜನೆ ಮಾಡಲಾಗಿದೆ. ಹಿಂದೆ ಸಾರ್ವಜನಿಕರು ಯಾವ ರೀತಿ ಸಹಕಾರ ಕೊಟ್ಟಿದ್ದಾರೋ ಅದೇ ರೀತಿ ಈ ಬಾರಿಯೂ ಸಹಕಾರ ಕೊಡಬೇಕು ಎಂದರು.

ಅನಗತ್ಯವಾಗಿ ಮನೆಯಿಂದ ಯಾರೊಬ್ಬರೂ ಆಚೆ ಬರದಂತೆ ಮನವಿ ಮಾಡಿದ ಅವರು, ಈಗಾಗಲೇ ತೀರ್ಮಾನಿಸಿದಂತೆ ಜ.1ರಿಂದ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ತರಗತಿಗಳು ಆರಂಭವಾಗಲಿವೆ. ಒಂದು ವೇಳೆ 2ನೇ ಕೊರೊನಾ ಅಲೆ ಹೆಚ್ಚಾಗಬಹುದಾದರೆ ಮೂರು ದಿನಗಳ ನಂತರ ಹಿರಿಯ ಅಧಿಕಾರಿಗಳ ಜೊತೆ ಚರ್ಚೆ ನಡೆಸಿ ಮುಂದಿನ ಬೆಳವಣಿಗೆಗಳ ಕುರಿತಂತೆ 29ರಂದು ಸಭೆ ನಡೆಸಲಿದ್ದೇವೆ. ನಂತರ ತೀರ್ಮಾನ ಕೈಗೊಳ್ಳಲಿದ್ದೇವೆ ಎಂದು ಹೇಳಿದರು.

ಸಚಿವ ಡಾ.ಕೆ.ಸುಧಾಕರ್ ಮಾತನಾಡಿ, ರಾಜ್ಯದಲ್ಲಿ 2ನೇ ರೂಪಾಂತರಗೊಂಡ ಕೋವಿಡ್ ಹರಡಬಹುದೆಂಬ ತಜ್ಞರ ಸಲಹೆ ಮೇರೆಗೆ ಇಂದು ರಾತ್ರಿ 10ರಿಂದಲೇ ಕರ್ಫ್ಯೂ ಜಾರಿಯಾಗಲಿದೆ. ವೈದ್ಯಕೀಯ, ತುರ್ತು ಸೇವೆ, ಆ್ಯಂಬುಲೆನ್ಸ್ ಸೇವೆ, ಔಷಧಿ ಅಂಗಡಿಗಳು ಸೇರಿದಂತೆ ಅಗತ್ಯ ಸೇವೆಗಳು ಯಥಾಸ್ಥಿತಿಯಲ್ಲೇ ಮುಂದುವರೆಯಲಿದೆ. ಉಳಿದಂತೆ ಯಾವುದೇ ರೀತಿಯ ಚಟುವಟಿಕೆಗಳು ಇರುವುದಿಲ್ಲ ಎಂದು ಹೇಳಿದರು.

ಬೆಂಗಳೂರು ಸೇರಿದಂತೆ ಇಡೀ ರಾಜ್ಯಕ್ಕೆ ಇದು ಅನ್ವಯವಾಗಲಿದೆ. ಮುಂದಿನ ದಿನಗಳಲ್ಲಿ ಕ್ರಿಸ್‌ಮಸ್, ಹೊಸ ವರ್ಷಾಚರಣೆ, ಹಬ್ಬ ಹರಿದಿನಗಳು ನಡೆಯಲಿವೆ. ಹೆಚ್ಚಿನ ಜನಸಂದಣಿ ತಡೆಗಟ್ಟಲು ಸರ್ಕಾರ ಈ ಕ್ರಮ ಕೈಗೊಂಡಿದೆ ಎಂದು ಸಮರ್ಥಿಸಿಕೊಂಡರು.

ಕಳೆದ ನ.25ರಿಂದ ಡಿ.22ರವರೆಗೆ ಬ್ರಿಟನ್‌ನಿಂದ ಎರಡೂವರೆ ಸಾವಿರ ಜನರು ರಾಜ್ಯಕ್ಕೆ ಆಗಮಿಸಿದ್ದಾರೆ. ಇವರ ಚಲನವಲನದ ಬಗ್ಗೆ ಕಣ್ಣಿಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇವರನ್ನು 14 ದಿನಗಳ ಕಾಲ ಹೋಂ ಕ್ವಾರಂಟೇನ್ ಒಳಪಡಿಸಬೇಕೆಂದು ಸೂಚಿಸಲಾಗಿದೆ.

ಕಳೆದ 14 ದಿನಗಳಿಂದ ಈಚೆಗೆ ಬಂದವರಿಗೆ ಕಡ್ಡಾಯವಾಗಿ ಆರ್‌ಟಿಪಿಸಿಆರ್ ಪರೀಕ್ಷೆಗೆ ಒಳಪಡಿಸಲು ತಂತ್ರಜ್ಞಾನ ಬಳಸಿಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ. ಯಾರೊಬ್ಬರೂ ಆತಂಕಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಕಳೆದ ಎರಡು ದಿನಗಳಿಂದ ಬಂದಿರುವವರಿಗೆ ವಿಮಾನ ನಿಲ್ದಾಣದಲ್ಲಿ ತಪಾಸಣೆ ನಡೆಸಲಾಗುವುದು. ರೋಗ ಲಕ್ಷಣ ಕಂಡುಬಂದಲ್ಲಿ ಹೋಂ ಕ್ವಾರಂಟೇನ್‌ಗೆ ಸೂಚಿಸಲಿದ್ದೇವೆ. ಜೊತೆಗೆ ಕೋವಿಡ್ ನೆಗೆಟಿವ್ ಪತ್ರವನ್ನು ಹಾಜರುಪಡಿಸಬೇಕು ಇತ್ಯಾದಿ ಕ್ರಮಗಳನ್ನು ಕಡ್ಡಾಯಗೊಳಿಸಿದ್ದೇವೆ ಎಂದರು.

ಬೆಂಗಳೂರಿನಲ್ಲಿ ನಾಲ್ಕು ಕೇಂದ್ರಗಳಲ್ಲಿ ಪರೀಕ್ಷೆಗೊಳಪಡಿಸುವ ಅವಕಾಶವಿದೆ. ನಿಮ್ಹಾನ್ಸ್, ಐಐಎಸ್‌ಸಿ, ಎನ್‌ಸಿಬಿಎಸ್ ಸೇರಿದಂತೆ ನಾಲ್ಕು ಸಂಸ್ಥೆಗಳಲ್ಲಿ ಪರೀಕ್ಷೆ ಮಾಡಿಸಿಕೊಳ್ಳುವ ವ್ಯವಸ್ಥೆಯಿದೆ. ಎರಡುಮೂರು

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

# ಬಿಬಿಎಂಪಿ ಕಚೇರಿಗೆ ಸಾರ್ವಜನಿಕ ಪ್ರವೇಶ ನಿರ್ಬಂಧ ಸಾಧ್ಯತೆ

**ಬೆಂಗಳೂರು, ಡಿ.23-** ಆಯುಕ್ತರಿಗೆ ಕೊರೊನಾ ಸೋಂಕು ತಗುಲಿದ ಹಿನ್ನೆಲೆಯಲ್ಲಿ ಬಿಬಿಎಂಪಿಗೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸುವ ಸಾಧ್ಯತೆ ಇದೆ.

ಬಿಬಿಎಂಪಿಯಿಂದ ಹೊಸ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಲು ನಿರ್ಧರಿಸಲಾಗಿದ್ದು, ಕೇಂದ್ರ, ಹಾಗೂ ಬೇರೆ ಬೇರೆ ಪಾಲಿಕೆ ಕಚೇರಿಗಳನ್ನು ಸುರಕ್ಷಿತವಾಗಿಡಲು ಎಚ್ಚರಿಕೆ ಕ್ರಮ ಅನುಸರಿಸಲಾಗುತ್ತಿದೆ.

ಬಿಬಿಎಂಪಿ ಆಯುಕ್ತರಿಗೆ ಸೋಂಕು ತಗುಲಿದ ಬಳಿಕ ಅವರ ಜತೆ ಸಂಪರ್ಕದಲ್ಲಿದ್ದವರನ್ನು ಕ್ವಾರಂಟೈನ್‌ಗೆ ಒಳಪಡಿಸಬೇಕಿದೆ. ಒಂದು ವೇಳೆ ಆ ರೀತಿ ಮಾಡಿದ್ದೇ ಆದರೆ ಬಹಳಷ್ಟು ಮಂದಿ ಅಧಿಕಾರಿಗಳು ಕ್ವಾರಂಟೈನ್ ಆಗಬೇಕಿದ್ದು, ಕೆಲಸ ಮಾಡುವವರ ಕೊರತೆ ಎದುರಾಗುತ್ತದೆ. ಇದರಿಂದ ಸಾರ್ವಜನಿಕರ ಕೆಲಸ-ಕಾರ್ಯಗಳಿಗೆ ತೊಂದರೆಯಾಗಲಿದೆ. ಹಾಗಾಗಿ ಬಿಬಿಎಂಪಿ ಪ್ರತ್ಯೇಕ ಎಸ್‌ಒಪಿಯನ್ನು ರೂಪಿಸಿಕೊಳ್ಳಲು ಮುಂದಾಗಿದೆ.

ಕಚೇರಿಗಳಿಗೆ ಹೆಚ್ಚಿನ ಜನರು ಬರದಂತೆ ತಡೆದು ಆದಷ್ಟು ಸೋಂಕಿನಿಂದ ರಕ್ಷಣೆ ಪಡೆದುಕೊಳ್ಳುವ ಪ್ರಯತ್ನ ನಡೆಯುತ್ತಿದೆ. ಅನಗತ್ಯವಾಗಿ ಜನರು ಕಚೇರಿಗಳಿಗೆ ಬರುವುದನ್ನು ತಪ್ಪಿಸಲು ಸಾಧ್ಯವಿರುವ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳು ಮುಂದಾಗಿದ್ದಾರೆ. ನಿರ್ದಿಷ್ಟ ಕೆಲಸಗಳಿಗೆ ಮಾತ್ರ ಕಚೇರಿಗೆ ಭೇಟಿ ನೀಡಬೇಕು. ಕಚೇರಿಗೆ ಭೇಟಿ ನೀಡುವವರ ಸಂಖ್ಯೆಯ ಮೇಲೂ ಕೂಡ ನಿರ್ಬಂಧ ವಿಧಿಸುವ ಸಾಧ್ಯತೆಗಳಿವೆ. ಆಯ್ದ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಮಾಧ್ಯಮದವರನ್ನು ಮಾತ್ರ ಬಿಬಿಎಂಪಿಗೆ ಭೇಟಿ ನೀಡಲು ಅವಕಾಶ ನೀಡಬಹುದು ಎಂದು ಹೇಳಲಾಗುತ್ತಿದೆ.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ



ಬಿಬಿಎಂಪಿ ವ್ಯಾಪ್ತಿಯಲ್ಲಿ ಬೆಂಗಳೂರು ಮಿಷನ್-2022ಗೆ ಸಂಬಂಧಿಸಿದಂತೆ ಸ್ವಚ್ಛ ಬೆಂಗಳೂರು ಅಂಶದಡಿ ಕೈಗೊಂಡಿರುವ ಕಾರ್ಯಗಳ ಕುರಿತು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್‌ಗುಪ್ತಾ ಅವರು ಸಭೆ ನಡೆಸಿದರು. ವಿಶೇಷ ಆಯುಕ್ತ (ಘನತ್ಯಾಜ್ಯ) ರಂದೀಪ್, ಜಂಟಿ ಆಯುಕ್ತ ಸರ್ಫರಾಜ್‌ಖಾನ್, ಮುಖ್ಯ ಅಭಿಯಂತರ ವಿಶ್ವನಾಥ್, ಬಸವರಾಜು ಕಬಾಡೆ ಮತ್ತಿತರ ಅಧಿಕಾರಿಗಳು ಹಾಜರಿದ್ದರು.